ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923

ಸಂಪುಟ: Vol: 04 | ಸಂಚಿಕೆ: Issue: 77 | ರಾಯಚೂರು Raichur | 09-09-2026 | ಬುಧವಾರ Wednesday | ಪುಟ : Page: 04 | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685


ಉಪವಿಭಾಗದ ನೂತನ ಸಹಾಯಕ ಆಯುಕ್ತರಾಗಿ ನಾಗೇಂದ್ರ ಬಾಬು ಕುಮಾರ್ ಅಧಿಕಾರ ಸ್ವೀಕಾರ



## ಎಪಿಎಂಸಿ ಮಾರುಕಟ್ಟೆಯಲ್ಲಿ ಬಾಲಕಾರ್ಮಿಕರ ಬಳಕೆ ಆರೋಪ: 19 ಅಪ್ರಾಪ್ತರ ರಕ್ಷಣೆ, ನಾಲ್ವರ ಬಂಧನ

ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಬೆಳಗ್ಗೆ ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿ ರೈತರು, ವ್ಯಾಪಾರಿಗಳು ಹಾಗೂ ಕಾರ್ಮಿಕರೊಂದಿಗೆ ಮಾತುಕತೆ ನಡೆಸಿದ ವೇಳೆ, ಕೆಲ ಅಂಗಡಿಗಳಲ್ಲಿ ಅಪ್ರಾಪ್ತ ಮಕ್ಕಳನ್ನು ಕೆಲಸಕ್ಕೆ ಬಳಸಲಾಗುತ್ತಿದೆ ಎಂಬ ದೂರು ಕೇಳಿಬಂದಿತ್ತು.

ಈ ಹಿನ್ನೆಲೆಯಲ್ಲಿ ಪೊಲೀಸರು ಹಾಗೂ ಕಾರ್ಮಿಕ ಇಲಾಖೆ ಅಧಿಕಾರಿಗಳು ಎಪಿಎಂಸಿ ಮಾರುಕಟ್ಟೆಯಲ್ಲಿ ದಾಳಿ ನಡೆಸಿ 19 ಅಪ್ರಾಪ್ತ ವಯಸ್ಕರನ್ನು ರಕ್ಷಿಸಿದ್ದು, ನಾಲ್ವರು ಅಂಗಡಿ ಮಾಲೀಕರನ್ನು ಬಂಧಿಸಿದ್ದಾರೆ.

ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಹಾಗೂ



ಉತ್ತರ ವಿಭಾಗದ ಉಪ ಪೊಲೀಸ್ ಆಯುಕ್ತರ ಮೇಲ್ವಿಚಾರಣೆಯಲ್ಲಿ ಐದು ವಿಶೇಷ ತಂಡಗಳನ್ನು ರಚಿಸಿ ಕಾರ್ಯಾಚರಣೆ ನಡೆಸಲಾಯಿತು. ಎಸಿಪಿಗಳು, ಇನ್ಸ್‌ಪೆಕ್ಟರ್‌ಗಳು ಹಾಗೂ ಕಾರ್ಮಿಕ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ತಂಡಗಳು ಮಾರುಕಟ್ಟೆಯ ವಿವಿಧ ಭಾಗಗಳಲ್ಲಿ ಪರಿಶೀಲನೆ ನಡೆಸಿವೆ.

ರಕ್ಷಿಸಲಾದ 19 ಮಕ್ಕಳಲ್ಲಿ 12 ವರ್ಷದ ಬಾಲಕಿ ಸೇರಿದಂತೆ 13 ಮಂದಿ ಬಿಹಾರ ಮೂಲದವರಾಗಿದ್ದು, ಉಳಿದವರು ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ರಾಜಸ್ಥಾನ ಹಾಗೂ ಕರ್ನಾಟಕ ಮೂಲದವರು ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

ಎಪಿಎಂಸಿ ಯಾರ್ಡ್‌ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶಾಹಿದ್, ಅಮೀರ್, ಪ್ರಕಾಶ್ ಹಾಗೂ ಸೈಫ್ ಎಂಬ ನಾಲ್ವರು ಅಂಗಡಿ ಮಾಲೀಕರನ್ನು ಪೊಲೀಸರು ಬಂಧಿಸಿದ್ದಾರೆ.

ಮಕ್ಕಳನ್ನು ಲೋಡಿಂಗ್, ಅನ್‌ಲೋಡಿಂಗ್ ಹಾಗೂ ಟ್ರಕ್ ಸಂಚಾರಕ್ಕೆ ಸಂಬಂಧಿಸಿದ ಅಪಾಯಕಾರಿ ಕೆಲಸಗಳಲ್ಲಿ ಬಳಸಲಾಗುತ್ತಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣಗಳನ್ನು ದಾಖಲಿಸಲಾಗಿದ್ದು, ಇನ್ನಷ್ಟು ಶಂಕಿತರನ್ನು ಗುರುತಿಸಲು ಸಿಸಿಟಿವಿ ದೃಶ್ಯಾವಳಿಗಳ ಪರಿಶೀಲನೆ ಮುಂದುವರಿದಿದೆ ಎಂದು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಹೇಳಿದ್ದಾರೆ.

## ಬಳ್ಳಾರಿ ಚಲೋ ಬದಲು ರಾಯಚೂರು ವಾರ್ಡ್‌ಗಳಲ್ಲಿ ಪಾದಯಾತ್ರೆ ಮಾಡಿ: ಬಂಗಿ ಮುನಿರೆಡ್ಡಿ



ರಾಯಚೂರು: ರಾಯಚೂರಿನಿಂದ ಬಳ್ಳಾರಿ ಚಲೋ ಪಾದಯಾತ್ರೆ ನಡೆಸುವುದಕ್ಕಿಂತ, ನಗರ ಶಾಸಕರು ತಮ್ಮನ್ನು ಪದೇಪದೇ ಆಯ್ಕೆ ಮಾಡಿರುವ ಕ್ಷೇತ್ರದ ಜನರ ಸಮಸ್ಯೆಗಳನ್ನು ಅರಿಯಲು ರಾಯಚೂರು ನಗರದ ಪ್ರತಿಯೊಂದು ವಾರ್ಡ್‌ನಲ್ಲೂ ಪಾದಯಾತ್ರೆ ನಡೆಸಬೇಕು ಎಂದು ಲೋಕ ಜನಶಕ್ತಿ ಶಕ್ತಿಕೀ. ಸೇ ಪಕ್ಷದ ರಾಯಚೂರು ಜಿಲ್ಲಾಧ್ಯಕ್ಷ ಬಂಗಿ ಮುನಿರೆಡ್ಡಿ ಒತ್ತಾಯಿಸಿದ್ದಾರೆ.

ರಾಜ್ಯ ಬಿಜೆಪಿ ಪಕ್ಷದ ಹೋರಾಟಗಳು ಹಾಗೂ ರಾಜಕೀಯ ಕಾರ್ಯಕ್ರಮಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡು ಕಾಲಹರಣ ಮಾಡುವ ಬದಲು, ರಾಯಚೂರು ವಿಧಾನಸಭಾ ಕ್ಷೇತ್ರದ ಜನರು ಎದುರಿಸುತ್ತಿರುವ ಮೂಲಭೂತ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡಬೇಕು. ಕ್ಷೇತ್ರದ ಜನರು ಪದೇಪದೇ ಮತ ನೀಡಿ ಆಯ್ಕೆ ಮಾಡುತ್ತಿರುವಾಗ, ಅವರ ಅಭಿವೃದ್ಧಿಗಾಗಿ ಜನಪ್ರತಿನಿಧಿಗಳ ಕೊಡುಗೆ ಏನು ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕಿದೆ ಎಂದು ಅವರು ಪ್ರಶ್ನಿಸಿದ್ದಾರೆ.

ನಗರದ ಹಲವು ವಾರ್ಡ್‌ಗಳಲ್ಲಿ ಚರಂಡಿ ವ್ಯವಸ್ಥೆ ಹದಗೆಟ್ಟಿದ್ದು, ಕೆಲವೆಡೆ ಚರಂಡಿ ನೀರು ರಸ್ತೆ ಮೇಲೆ ಹರಿಯುತ್ತಿದೆ. ಇದೇ ನೀರು ಕುಡಿಯುವ 2ನೇ ಪುಟಕ್ಕೆ

## ಶ್ರಾವಣದ ಭಕ್ತಿ, ಸುಗೂರೇಶ್ವರನ ಆಶೀರ್ವಾದ: ದೇವಸುಗೂರು ಅಭಿವೃದ್ಧಿಗೆ ಹೊಸ ಸಂಕಲ್ಪ

ರಾಯಚೂರು: ಶ್ರಾವಣ ಮಾಸದ ಕೊನೆಯ ಸೋಮವಾರದ ಪವಿತ್ರ ಸಂದರ್ಭದಲ್ಲಿ ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಅವರು ದೇವಸುಗೂರು ಗ್ರಾಮದ ಪ್ರಸಿದ್ಧ ಶ್ರೀ ಸುಗೂರೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ, ಶ್ರೀ ಸುಗೂರೇಶ್ವರ ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು.

ಶ್ರಾವಣ ಮಾಸದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಭಕ್ತಿಯ ವಾತಾವರಣ ಮನೆಮಾಡಿತ್ತು. ಶಾಸಕ ಬಸನಗೌಡ ದದ್ದಲ್ ಅವರು ಶ್ರೀ ಸುಗೂರೇಶ್ವರ ಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿದ ಬಳಿಕ ದೇವಸ್ಥಾನದ ಆವರಣದಲ್ಲಿ ಕೈಗೊಳ್ಳಲಾಗುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ವೀಕ್ಷಿಸಿ ಪರಿಶೀಲಿಸಿದರು.

ದೇವಸ್ಥಾನದ ಭವನ ನಿರ್ಮಾಣ, ದೇವಸ್ಥಾನದ ಎದುರು ಬೃಹತ್ ಪ್ರತಿಮೆ ನಿರ್ಮಾಣ ಹಾಗೂ ದೇವಸ್ಥಾನದ ಶೆಡ್ ನವೀಕರಣ ಸೇರಿದಂತೆ ವಿವಿಧ ಕಾಮಗಾರಿಗಳ



ಪ್ರಗತಿಯನ್ನು ಪರಿಶೀಲಿಸಿದರು. ಸುಮಾರು ₹4 ಕೋಟಿ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಈ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡ ನಂತರ ದೇವಸ್ಥಾನದ ಸೌಂದರ್ಯ ಮತ್ತಷ್ಟು ಹೆಚ್ಚುವುದರ ಜೊತೆಗೆ, ಇಲ್ಲಿಗೆ ಆಗಮಿಸುವ ಭಕ್ತರಿಗೆ ಅಗತ್ಯ ಮೂಲಸೌಕರ್ಯ ಹಾಗೂ ಸೌಲಭ್ಯಗಳು ದೊರೆಯಲಿವೆ ಎಂದು ತಿಳಿಸಿದರು.

ಶ್ರೀ ಸುಗೂರೇಶ್ವರ ದೇವಸ್ಥಾನವು ದೇವಸುಗೂರು ಗ್ರಾಮದ ಪ್ರಮುಖ ಧಾರ್ಮಿಕ ಕೇಂದ್ರವಾಗಿದ್ದು, ದೇವಸ್ಥಾನದ ಅಭಿವೃದ್ಧಿಯೊಂದಿಗೆ ಗ್ರಾಮದ ಅಭಿವೃದ್ಧಿಗೂ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. 2ನೇ ಪುಟಕ್ಕೆ

## ನಗರ ಸ್ವಚ್ಛತೆಗೆ ಸಾರ್ವಜನಿಕರ ಸಹಕಾರ ಅಗತ್ಯ: ರವಿ ಬೋಸರಾಜು

ರಾಯಚೂರು: ಸ್ವಚ್ಛ ಹಾಗೂ ಸುಂದರ ನಗರ ನಿರ್ಮಾಣದಲ್ಲಿ ಸಾರ್ವಜನಿಕರ ಸಹಕಾರ ಅತ್ಯಂತ ಮಹತ್ವದ್ದಾಗಿದೆ. ಪ್ರತಿಯೊಬ್ಬರೂ ತಮ್ಮ ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಂಡು, ಕಸವನ್ನು ಎಲ್ಲೆಂದರಲ್ಲಿ ಎಸೆಯದೆ ಸಮರ್ಪಕವಾಗಿ ವಿಲೇವಾರಿ ಮಾಡುವ ಮೂಲಕ ನಗರ ಸ್ವಚ್ಛತೆಗೆ ಕೈಜೋಡಿಸಬೇಕು ಎಂದು ಕಾಂಗ್ರೆಸ್ ರಾಜ್ಯ ಯುವ ಮುಖಂಡ ರವಿ ಬೋಸರಾಜು ಮನವಿ ಮಾಡಿದರು.

ನಗರದ ವಾರ್ಡ್ ನಂ. 7 ಮತ್ತು 8ರ ಟಿಪ್ಪು ಸುಲ್ತಾನ್ ರಸ್ತೆ ಬಡಾವಣೆಗೆ ಭೇಟಿ ನೀಡಿದ ಅವರು, ಅಲ್ಲಿನ ಸ್ವಚ್ಛತೆ ಹಾಗೂ ಮೂಲಸೌಕರ್ಯ ಸಮಸ್ಯೆಗಳನ್ನು ಪರಿಶೀಲಿಸಿದರು. ಈ ವೇಳೆ ಸ್ಥಳೀಯ ನಿವಾಸಿಗಳೊಂದಿಗೆ ಚರ್ಚೆ ನಡೆಸಿ, ಬಡಾವಣೆಯಲ್ಲಿ ಎದುರಾಗುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಮಾಹಿತಿ ಪಡೆದರು.

ರಸ್ತೆಗಳ ಸ್ಥಿತಿ, ಒಳಚರಂಡಿ ವ್ಯವಸ್ಥೆ, ಕುಡಿಯುವ ನೀರು ಹಾಗೂ ಸ್ವಚ್ಛತೆಗೆ ಸಂಬಂಧಿಸಿದ ಸಮಸ್ಯೆಗಳನ್ನು ನಿವಾಸಿಗಳು ರವಿ ಬೋಸರಾಜು ಅವರ ಗಮನಕ್ಕೆ



ತಂದರು. ಸಾರ್ವಜನಿಕರಿಂದ ಸಮಸ್ಯೆಗಳ ವಿವರ ಪಡೆದುಕೊಂಡ ಅವರು, ಅವುಗಳನ್ನು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸುವುದಾಗಿ ತಿಳಿಸಿದರು.

ನಗರದ ಅಭಿವೃದ್ಧಿಯ ಜೊತೆಗೆ ಸ್ವಚ್ಛ ಪರಿಸರ ನಿರ್ಮಾಣಕ್ಕೂ ಸಾರ್ವಜನಿಕರು ಜವಾಬ್ದಾರಿಯಿಂದ ವರ್ತಿಸಬೇಕು. ಮನೆಯ ಕಸ ಹಾಗೂ ಇತರೆ ತ್ಯಾಜ್ಯವನ್ನು ನಿಗದಿತ ಸ್ಥಳದಲ್ಲೇ ವಿಲೇವಾರಿ ಮಾಡಬೇಕು. ಬಡಾವಣೆಗಳ ಸ್ವಚ್ಛತೆ ಕಾಪಾಡಿಕೊಳ್ಳಲು ಸ್ಥಳೀಯ ನಿವಾಸಿಗಳು ಮತ್ತು ಸಂಬಂಧಿಸಿದ ಇಲಾಖೆಗಳು ಪರಸ್ಪರ ಸಹಕಾರದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ನರಸಿಂಹಲು ಮಾಡಗಿರಿ, ವಾಹೀದ್, ಅಲಿ, ಆತೀಖ್, ರಾಮನಗೌಡ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಗಣೇಶೋತ್ಸವದಲ್ಲಿ ಶಾಂತಿ-ಸುವ್ಯವಸ್ಥೆಗೆ ಆದ್ಯತೆ ನೀಡಿ: ಎಸ್‌ಪಿ

ರಾಯಚೂರು, ಸೆ.8: ಮುಂಬರುವ ಗಣೇಶ ಹಬ್ಬವನ್ನು ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ನೀಡದೆ ಶಾಂತಿ, ಸೌಹಾರ್ದತೆ ಹಾಗೂ ಕಾನೂನು-ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಆಚರಿಸಲು ಎಲ್ಲ ಸಮುದಾಯದ ಮುಖಂಡರು ಮತ್ತು ಗಣೇಶ ಮಂಡಳಿಗಳ ಪದಾಧಿಕಾರಿಗಳು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಶು ಗಿರಿ ಹೇಳಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಸೆ.8ರಂದು ಮುಂಬರುವ ಗಣೇಶ ಹಬ್ಬದ ಹಿನ್ನೆಲೆಯಲ್ಲಿ ವಿವಿಧ ಸಮುದಾಯಗಳ ಮುಖಂಡರು ಹಾಗೂ ಗಣೇಶ ಮಂಡಳಿಗಳ ಮುಖ್ಯಸ್ಥರೊಂದಿಗೆ ಆಯೋಜಿಸಿದ್ದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗಣೇಶೋತ್ಸವವು ಸಾರ್ವಜನಿಕರು



ಸಂಭ್ರಮದಿಂದ ಆಚರಿಸುವ ಹಬ್ಬವಾಗಿದ್ದು, ಹಬ್ಬದ ಸಂದರ್ಭದಲ್ಲಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಯಿಂದ ಹಿಡಿದು ವಿಸರ್ಜನೆಯವರೆಗೆ ಆಯೋಜಕರು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಪೊಲೀಸ್ ಇಲಾಖೆಯ ಸಲಹೆ-ಸೂಚನೆಗಳನ್ನು ಪಾಲಿಸಬೇಕು ಎಂದು ತಿಳಿಸಿದರು.

ಸಾರ್ವಜನಿಕ ಗಣೇಶೋತ್ಸವ ಆಯೋಜಿಸುವ ಮಂಡಳಿಗಳು ಹಬ್ಬದ ಆಚರಣೆಯ ಸಂದರ್ಭದಲ್ಲಿ ಕಾನೂನು-ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ವಿವಿಧ ಸಮುದಾಯಗಳ ನಡುವೆ ಪರಸ್ಪರ ವಿಶ್ವಾಸ, ಸಹಕಾರ ಮತ್ತು ಸೌಹಾರ್ದತೆಯನ್ನು ಕಾಪಾಡಿಕೊಂಡು 2ನೇ ಪುಟಕ್ಕೆ

## ಗೌರಿ-ಗಣೇಶ ಹಬ್ಬ ಶಾಂತಿಯುತ ಆಚರಣೆಗೆ ಸಾರ್ವಜನಿಕರ ಸಹಕಾರ ಅಗತ್ಯ: ಎಸ್‌ಪಿ ಅರುಣಾಂಗ್ಶು ಗಿರಿ

ಮಾನ್ವಿ: ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದ ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಶು ಗಿರಿ, ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸುರಕ್ಷತಾ ನಿಯಮಗಳನ್ನು ಪಾಲಿಸಿಕೊಂಡು ಆಚರಿಸುವಂತೆ ಸಾರ್ವಜನಿಕರು ಮತ್ತು ಗಣೇಶೋತ್ಸವ ಸಮಿತಿಗಳಿಗೆ ಮನವಿ ಮಾಡಿದರು.

ಈ ಬಾರಿ ರಾಯಚೂರು ಜಿಲ್ಲೆಯಲ್ಲಿ ಅಂದಾಜು 4 ಸಾವಿರಕ್ಕೂ ಹೆಚ್ಚು ಸಾರ್ವಜನಿಕ ಗಣೇಶೋತ್ಸವಗಳನ್ನು ಆಯೋಜಿಸಲಾಗುತ್ತಿದ್ದು, ಸುಮಾರು 21 ದಿನಗಳ ಕಾಲ ಕೇವಲ 700 ಪೊಲೀಸ್ ಸಿಬ್ಬಂದಿಯಿಂದ ಭದ್ರತಾ ವ್ಯವಸ್ಥೆ ಕಲ್ಪಿಸಬೇಕಾದ ಪರಿಸ್ಥಿತಿ ಇದೆ. ಆದ್ದರಿಂದ ಪ್ರತಿಯೊಂದು ಗಣೇಶೋತ್ಸವ ಸಮಿತಿಯ ಸ್ವಯಂಸೇವಕರು ಪೊಲೀಸ್ ಇಲಾಖೆಯೊಂದಿಗೆ



ಕೈಜೋಡಿಸಿ ಭದ್ರತೆ ಮತ್ತು ಶಿಸ್ತು ಕಾಪಾಡಲು ಸಹಕರಿಸಬೇಕು ಎಂದು ಹೇಳಿದರು.

ಸಾರ್ವಜನಿಕ ಸ್ಥಳಗಳಲ್ಲಿ ಬ್ಯಾನರ್‌ಗಳು, ಪೋಸ್ಟರ್‌ಗಳು ಅಥವಾ ಸಾಮಾಜಿಕ ಜಾಲತಾಣಗಳ ಮೂಲಕ ಅನ್ಯಕೋಮಿನವರ ವಿರುದ್ಧ ಪ್ರಚೋದನಕಾರಿ ಸಂದೇಶಗಳನ್ನು ಹರಡುವುದು, ಸಮಾಜದ ಶಾಂತಿ ಮತ್ತು ಸೌಹಾರ್ದತೆಯನ್ನು ಹಾಳುಮಾಡುವ ಪ್ರಯತ್ನ ನಡೆಸುವುದು ಕಾನೂನುಬಾಹಿರವಾಗಿದೆ. ಇಂತಹ ಕೃತ್ಯಗಳಲ್ಲಿ ತೊಡಗುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಮಾನ್ವಿ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳನ್ನು ಒಳಗೊಂಡಂತೆ ತಾಲೂಕಿನಲ್ಲಿ ಅಂದಾಜು 207ಕ್ಕೂ ಹೆಚ್ಚು ಸಾರ್ವಜನಿಕ ಗಣೇಶ ಮೂರ್ತಿಗಳನ್ನು 2ನೇ ಪುಟಕ್ಕೆ

## ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕಾರ್ಯಕ್ಷೇತ್ರ ವೀಕ್ಷಣೆ ಮಾಡಿ: ಉಜ್ವಲ್ ಕುಮಾರ್ ಘೋಷ್

ರಾಯಚೂರು ಸೆಪ್ಟಂಬರ್ 08 (ಕರ್ನಾಟಕ ವಾರ್ತೆ): ರಾಯಚೂರು ಮಹತ್ವಾಕಾಂಕ್ಷಿ ಜಿಲ್ಲೆ ಯೋಜನೆಯ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಕಾಲಕಾಲಕ್ಕೆ ಕಾರ್ಯಕ್ಷೇತ್ರವನ್ನು ವೀಕ್ಷಣೆ ಮಾಡಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ವಾಣಿಜ್ಯ ವಿಭಾಗದ ಜಂಟಿ ಕಾರ್ಯದರ್ಶಿಗಳು ಹಾಗೂ ಸಂಪೂರ್ಣತಾ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಕೇಂದ್ರ ಸರಕಾರದ ಪ್ರಭಾರಿ ಜಿಲ್ಲಾ ಉಸ್ತುವಾರಿಗಳಾದ ಉಜ್ವಲ್ ಕುಮಾರ್ ಘೋಷ್ ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಸೆಪ್ಟೆಂಬರ್ 08ರ ಮಂಗಳವಾರ ದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹತ್ವಾಕಾಂಕ್ಷೆ ಜಿಲ್ಲೆ ಹಾಗೂ ಬ್ಲಾಕ್ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು



ಮಾತನಾಡಿದರು.

ರಾಜ್ಯದ ಮಹತ್ವಾಕಾಂಕ್ಷೆ ಜಿಲ್ಲೆಯೆಂದು ಗುರುತಿಸಿಕೊಂಡಿರುವ ರಾಯಚೂರು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುವ ಮೂಲಕ ನಿರೀಕ್ಷಿತ ಗುರಿ ತಲುಪಬೇಕು. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕಾರ್ಯಪ್ರವೃತ್ತರಾಗಬೇಕು. ಕೃಷಿ ಮತ್ತು ಜಲಸಂಪನ್ಮೂಲ ಯೋಜನೆಯಡಿ ಸಣ್ಣ ನೀರಾವರಿ, ಮಣ್ಣು ಪರೀಕ್ಷೆಗಳನ್ನು ಹೆಚ್ಚಿಸಬೇಕು. ಶಾಲೆಗಳಲ್ಲಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆಯನ್ನು ಸಂಬಧಿಸಿದ ಇಲಾಖೆ ಅಧಿಕಾರಿಗಳೇ ಖಾತ್ರಿಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಮೂಲಭೂತ ಸೌಕರ್ಯ, ಆರ್ಥಿಕ ಅಭಿವೃದ್ಧಿ, ಶಿಕ್ಷಣ ಮತ್ತು ಆರೋಗ್ಯ ವಲಯದ ಸೂಚ್ಯಂಕ ಗುರಿಯಗಳನ್ನು ತಲುಪಲು ನಿರಂತರ ಮೇಲುಸ್ತುವಾರಿ ಅವಶ್ಯಕತೆಯಿದೆ. ಸಂಬಧಿಸಿದ ಇಲಾಖೆಗಳ ಮುಖ್ಯಸ್ಥರುಗಳು ನಿಗಾವಹಿಸುವುದರ ಜೊತೆಗೆ ಪ್ರಗತಿಯನ್ನು ದಾಖಲಿಸಬೇಕು. ಸೂಚ್ಯಂಕಗಳ ಗುರಿಯಂತೆ ಅನೇಕ ವಲಯಗಳಲ್ಲಿ 2ನೇ ಪುಟಕ್ಕೆ

## ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಕರೆ

ರಾಯಚೂರು ಸೆಪ್ಟಂಬರ್ 08 (ಕರ್ನಾಟಕ ವಾರ್ತೆ): ಸರ್ಕಾರದ ಆದೇಶದನ್ವಯ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ಮತ್ತು ರಾಸಾಯನಿಕ ಬಣ್ಣ ಲೇಪಿತ ಗಣಪತಿ ವಿಗ್ರಹಗಳ ತಯಾರಿಕೆ, ಸಂಗ್ರಹ, ಮಾರಾಟ ನಿಷೇಧಿಸಲಾಗಿದ್ದು, ಮಣ್ಣು ಅಥವಾ ನೈಸರ್ಗಿಕ ವಸ್ತುಗಳಿಂದ ತಯಾರಿಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿ ಮಾತ್ರ ಪ್ರತಿಷ್ಠಾಪಿಸಬೇಕು ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಸಾರ್ವಜನಿಕರಲ್ಲಿ ಕೋರಿದ್ದಾರೆ.

ರಾಯಚೂರು ಜಿಲ್ಲೆಯಲಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಸಹ ಆಚರಿಸಲಾಗುತ್ತಿರುವ ಗಣೇಶ ಚತುರ್ಥಿ ಹಬ್ಬದ ಸಮಯದಲ್ಲಿ ಗಣೇಶ ವಿಗ್ರಹಗಳ ತಯಾರು, ಸಂಗ್ರಹ, ಮಾರಾಟ ಮತ್ತು ವಿಸರ್ಜನೆಯಿಂದ ಪರಿಸರಕ್ಕೆ ಹಾನಿಯಾಗುವಂತಹ ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಒಪಿ) ವಸ್ತುಗಳು ಮತ್ತು ಲೋಹ ಮಿಶ್ರಿತ (ಆಯಿಲ್ ಪೆಂಟ್) ಬಣ್ಣಗಳನ್ನು ಉಪಯೋಗಿಸುವುದರಿಂದ, ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಇವುಗಳ ಭೌತಿಕ ಹಾಗೂ ರಾಸಾಯನಿಕ ಗುಣಗಳು ಮಾರ್ಪಟ್ಟು ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ



ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆ ಉಂಟಾಗುತ್ತದೆ. ಆದ್ದರಿಂದ ಗಣೇಶನ ಮೂರ್ತಿಗಳ ವಿಸರ್ಜನೆಯಿಂದ ಕೆರೆ, ಬಾವಿ, ಕೊಳ, ನದಿಗಳಲ್ಲಿನ ನೀರು ಮಾಲಿನ್ಯವಾಗದಂತೆ ಮೇಲ್ವಿಚಾರಣೆ ವಹಿಸುವುದು ಅವಶ್ಯಕ ಹಾಗೂ ಇದಕ್ಕಾಗಿ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ.

ಜಿಲ್ಲೆಯ ನಗರ ಹಾಗೂ ಪಟ್ಟಣ ಮತ್ತು ಗ್ರಾಮೀಣ ಪ್ರದೇಶಗಳ ವ್ಯಾಪ್ತಿಯಲ್ಲಿಯೂ ಈ ಬಾರಿಯ ಗೌರಿ-ಗಣೇಶ ಹಬ್ಬದ ಸಮಯದಲ್ಲಿ ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಣೆ ಕುರಿತು ಕೆಳಗಿನಂತೆ ಪಾಲನೆ ಮಾಡಲು ಸಾರ್ವಜನಿಕರಿಗೆ ತಿಳಿಸಿರುತ್ತಾರೆ.

ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ ನಿಂದ (ಪಿ.ಓ.ಪಿ)/ ಲೋಹ ಮಿಶ್ರಿತ ಬಣ್ಣ ಲೇಪಿತದಂತಹ ಮೂರ್ತಿಗಳನ್ನು ಬಳಸದೇ ನೈಸರ್ಗಿಕ ಬಣ್ಣಗಳಿಂದ ತಯಾರಿಸಿರುವ ಮಣ್ಣಿನ ಚಿಕ್ಕ ಮೂರ್ತಿಗಳನ್ನು ಖರೀದಿಸಿ ಪೂಜಿಸುವಂತೆ ತಿಳಿಸಲಾಗಿದೆ.

ಸಾರ್ವಜನಿಕ ಸ್ಥಳಗಳಲ್ಲಿ ಗಣೇಶ ಮೂರ್ತಿಗಳ ಸ್ಥಾಪನೆಗೆ ಸಂಬಧಪಟ್ಟತೆ, ಗಣೇಶ ಮಂಡಳಿಯವರು ಸ್ಥಳೀಯ ಸಂಸ್ಥೆಗಳು ಮತ್ತು ಪೊಲೀಸ್ ಇಲಾಖೆಯಿಂದ ಅಗತ್ಯ ಪರವಾನಿಗೆ ಪಡೆಯುವ ಮೂಲಕ ಷರತ್ತು ಮತ್ತು ನಿಬಂಧನೆಗಳನ್ನು ಪಾಲನೆ ಮಾಡಲು ತಿಳಿಸಲಾಗಿದೆ.

ಹಬ್ಬದ ಸಂದರ್ಭದಲ್ಲಿ ಪ್ಲಾಸ್ಟಿಕ್ ರಹಿತ ವಸ್ತುಗಳ ಬದಲಿಗೆ ಹೂವು ಪತ್ರೆಗಳಿಂದ ಅಲಂಕರಿಸಿ ಮಣ್ಣಿನ ಗಣೇಶ ಮೂರ್ತಿಯನ್ನು ಪೂಜಿಸುವುದು.

ಗಣೇಶನ ಮೂರ್ತಿಗಳನ್ನು ಸ್ಥಳೀಯ ಸಂಸ್ಥೆಗಳು (ಮುನ್ಸಿಪಾಲಿಟಿಗಳು) ಗೊತ್ತುಪಡಿಸಿದ ತಾತ್ಕಾಲಿಕ 2ನೇ ಪುಟಕ್ಕೆ

## ಡಿ.ದೇವರಾಜ ಅರಸು ನಿಗಮದಿಂದ ವಿವಿಧ ಯೋಜನೆಯಡಿ ಅರ್ಜಿ ಆಹ್ವಾನ

ರಾಯಚೂರು ಸೆಪ್ಟಂಬರ್ 08 (ಕರ್ನಾಟಕ ವಾರ್ತೆ): ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2026-27ನೇ ಸಾಲಿನಲ್ಲಿ ವಿವಿಧ ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಸೇವಾ ಸಿಂಧು ತಂತ್ರಾಶದ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ.

ನಿಗಮದಿಂದ ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಹೊಲಿಗೆ ಯಂತ್ರ ವಿತರಣೆ ಯೋಜನೆಗೆ ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆ ಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ, ತಿಗಳ, ಗಾಣಿಗ, ಕುಂಬಾರ, ಹಪಡದ, ಕೊಡುವ ಮತ್ತು ಈಡಿಗ ಇದರ ಉಪ ಸಮುದಾಯಗಳನ್ನು ಹೊರತುಪಡಿಸಿ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ನಲ್ಲಿ ಉಳಿದ ಸಮುದಾಯಗಳಿಗೆ ಅನ್ವಯವಾಗುತ್ತದೆ.

ಎಲ್ಲಾ ಯೋಜನೆಗಳಡಿಯಲ್ಲಿ ಸೌಲಭ್ಯ ಒದಗಿಸಲು ಸೇವಾ ಸಿಂಧು ತಂತ್ರಾಶದಲ್ಲಿ ವೆಬ್‌ಸೈಟ್ ವಿಳಾಸ: http://sevasindhu.karnataka.gov.in ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಸೆಪ್ಟಂಬರ್ 30ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸುವಾಗ ಅರ್ಜಿದಾರರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು. ಆಧಾರ್ ಕಾರ್ಡ್ ನಲ್ಲಿರುವಂತೆ ಅರ್ಜಿದಾರರ ಹೆಸರು, (ಶ್ರೀ/ಶ್ರೀಮತಿ ಕುಮಾರಿ ಮುಂತಾದ ಮಾಹಿತಿಗಳೆಲ್ಲವು) ಇತರೆ ದಾಖಲಾತಿಗಳಾದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಪುಸ್ತಕದಲ್ಲಿಯೂ ಇದ್ದು ಹೊಂದಾಣಿಕೆಯಾಗಬೇಕು.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. ಅಲ್ಲದೆ 2024-25 ಮತ್ತು 2025-26ನೇ ಸಾಲಿನಲ್ಲಿ ಅರ್ಜಿಸಲ್ಲಿಸಿ ಸೌಲಭ್ಯ ಪಡೆಯದೇ ಇರುವ ಫಲಾಪೇಕ್ಷಿಗಳು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ ವಿಳಾಸ: www.dbcdc.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ. ಅಥವಾ ನಿಗಮದ ಸಹಾಯವಾಣಿ ಸಂಖ್ಯೆ: 080-22374832 ಮತ್ತು 8050770004 ಅಥವಾ 8050770005 ಅಥವಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆ 08532-250440ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಂದ್ರಬಡ ಗ್ರಾಮದ ಅಶ್ವಿನಿ ಕಾಣೆ: ಪತ್ತೆಗೆ ಪೊಲೀಸರ ಮನವಿ



ರಾಯಚೂರು ಸೆಪ್ಟಂಬರ್ 08 (ಕರ್ನಾಟಕ ವಾರ್ತೆ): ರಾಯಚೂರಿನ ಯಾಪಲದಿನ್ನಿ ಪೊಲೀಸ್ ಠಾಣೆ ವ್ಯಾಪ್ತಿಯ ಚಂದ್ರಬಡ ಗ್ರಾಮದ ಅಶ್ವಿನಿ ತಂದೆ ಮಲ್ಲೇಶ (19) ಎಂಬ ಯುವತಿ 2026ರ ಸೆಪ್ಟಂಬರ್ 01ರ ಬೆಳಿಗ್ಗೆ 3ಗಂಟೆ ಸುಮಾರಿಗೆ ಮನೆಯಿಂದ ಕಾಣೆಯಾಗಿದ್ದು, ಈ ಕುರಿತು ಯಾಪಲದಿನ್ನಿ ಪೊಲೀಸ್ ಠಾಣೆ ಗುನ್ನೆ ನಂ 67/2026 ಕಲಂ ಮಹಿಳೆ ಕಾಣೆ ಪ್ರಕರಣ ದಾಖಲಾಗಿದೆ.

ಕಾಣೆಯಾದ ಯುವತಿಯ ತಾಯಿ ತಾಯಮ್ಮ ಗಂಡ ಮಲ್ಲೇಶ ಅವರು ಎಂದಿನತೆ ದಿನಾಂಕ 31.08.2026 ರಂದು ರಾತ್ರಿ 8.30 ಸುಮಾರಿಗೆ ಚಂದ್ರಬಡಾ ಗ್ರಾಮದ ತಮ್ಮ ಮನೆಯಲ್ಲಿ ಊಟ ಮಾಡಿದ ನಂತರ, ಮನೆಯಲ್ಲಿ ಮಲಗಿಕೊಂಡಿದ್ದು, ದಿನಾಂಕ-01.09.2026 ರಂದು ಬೆಳಗಿನ ಜಾವ 03.00 ಗಂಟೆ ಸುಮಾರಿಗೆ ಮೂತ್ರ ವಿರ್ಸಜನೆ ಮಾಡಲು ಎದ್ದು ತಮ್ಮ ಮಗಳನ್ನು ನೋಡಿದಾಗ ಅಶ್ವಿನಿ ಕಾಣದೆ ಇದ್ದಾದ ತಮ್ಮ ಮಗನನ್ನು ಎಬ್ಬಿಸಿಕೊಂಡು ಮನೆಯ ಹೊರಗಡೆ ಬಂದು ಮನೆಯ ಸುತ್ತಾಮುತ್ತಾ ಎಲ್ಲಾಕಡೆ ನೋಡಲಾಗಿದೆ. ಎಲ್ಲಿಯೂ ಸಿಕ್ಕಿರುವುದಿಲ್ಲ. ಅದೇ ದಿನದಂದು ಚಂದ್ರಬಡ ಗ್ರಾಮದ ವೀರೇಶ ತಂದೆ ಈರಪ್ಪ ಜಾ-ಕುರುಬರು ಊರಲ್ಲಿ ಕಾಣುತ್ತಿರುವುದಿಲ್ಲಾ ಅಂತಾ ಗೊತ್ತಾಗಿದ್ದು, ಆಗಾಗಿ ವೀರೇಶ ತಂದೆ ಈರಪ್ಪನು ಅಶ್ವಿನಿಯನ್ನು ಕರೆದುಕೊಂಡು ಹೋಗಿರಬಹುದೆಂದು ಅನುಮಾನ ಇರುತ್ತದೆ.

ಕಾರಣ ಕಾಣೆಯಾದ ಮಹಿಳೆ ಚಹರೆ ಪಟ್ಟಿ: ವಯಸ್ಸು 19 ವರ್ಷ, ಕೆಂಪು ಮೈಬಣ್ಣ, ದುಂಡನೆಯ ಮುಖ, ಕಪ್ಪು ಕೂದಲು, ಕಪ್ಪು ಬಣ್ಣದ ಪ್ಯಾಂಟ್, ತಿಳಿನೀಲಿ ಬಣ್ಣದ ಟಾಪ್ ಧರಿಸಿದ್ದು, ಕನ್ನಡ, ತೆಲುಗು ಭಾಷೆ ಮಾತನಾಡುತ್ತಾಳೆ.

ಈ ಚಹರೆಯುಳ್ಳ ಯುವತಿ ಪತ್ತೆಯಾದಲ್ಲಿ ಪಿಎಸ್‌ಐ ಯಾಪಲದಿನ್ನಿ ಠಾಣೆ 9480803851, ಸಿ.ಪಿ.ಐ ಗ್ರಾಮೀಣ ವೃತ್ತ 9480803832, ಕಂಟ್ರೋಲ ರೂಂ ರಾಯಚೂರು 94808083800, 08532-235635, ಗ್ರಾಮಿಣ ವೃತ್ತ ರಾಯಚೂರು 9480803832, ಯಾಪಲದಿನ್ನಿ ಠಾಣೆ ಆರಕ್ಷಕ ಉಪ ನಿರೀಕ್ಷಕರು 9480803851ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಮೃತ ವಾಣಿ
ಸುಲಭದ ಮತ್ತು ಸುಳ್ಳಿನ
ದಾರಿ ತಾತ್ಕಾಲಿಕ ಸಂತೋಷ
ಕೊಡುತ್ತದೆ.

1580 ನೇಯ ದಿನಕ್ಕೆ
ಏಮ್ಸ್
ಹೋರಾಟ

## 9ಎ ಕಾಲುವೆ ನೀರು ಕೆಳಭಾಗಕ್ಕೆ ಹರಿಸಲು ಒತ್ತಾಯಿಸಿ ಹಿರೇಹಣಗಿ ಬಳಿ ರೈತರ ಧರಣಿ




ಕವಿತಾಳ, ಸೆ.8: ಸಿರವಾರ ತಾಲೂಕಿನ ಹಿರೇಹಣಗಿ ಗ್ರಾಮದ ಬಳಿ ವಡವಟ್ಟಿ 9ಎ ಕಾಲುವೆ ನೀರನ್ನು ಕೆಳಭಾಗದ ಗ್ರಾಮಗಳಿಗೆ ಸಮರ್ಪಕವಾಗಿ ಹರಿಸುವಂತೆ ಒತ್ತಾಯಿಸಿ ರೈತ ಸಂಘಟನೆಗಳ ಮುಖಂಡರು ಹಾಗೂ ವಿವಿಧ ಗ್ರಾಮಗಳ ರೈತರು ಪ್ರತಿಭಟನೆ ನಡೆಸಿದರು.

ಹಿರೇಹಣಗಿ, ಪಾತಪುರ, ಗೊಲ್ಲದಿನ್ನಿ, ಚಿಕ್ಕ ಬಾದಾರದಿನ್ನಿ, ಕವಿತಾಳ, ಉಮಾಳಿ, ಗುಡದಿನ್ನಿ, ಸೈದಾಪುರ ಹಾಗೂ ಕಲ್ಲಮಗೇರಾ ಗ್ರಾಮಗಳ ರೈತರ ಜಮೀನುಗಳಿಗೆ ವಿತರಣೆ ಕಾಲುವೆ 4ರಿಂದ 11ಎವರೆಗೆ ನೀರು ಹರಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು. ಅಲ್ಲದೆ, ಕಲ್ಲಮಗೇರಾ ಗ್ರಾಮದ ಬಳಿ ಸುಮಾರು 2 ಕಿ.ಮೀ. ಕಾಲುವೆಗೆ ಸಿಸಿ ಕಾಮಗಾರಿ ಕೈಗೊಂಡು ಮುಂದಿನ ಗ್ರಾಮಗಳಿಗೆ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬರಗಾಲದ ಪರಿಸ್ಥಿತಿ ಇರುವುದರಿಂದ ಕಾಲುವೆ ದುರಸ್ತಿ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ ರೈತರ ಹೊಲಗಳಿಗೆ ನೀರು ಬಿಡಬೇಕು ಎಂದು ಮನವಿ ಮಾಡಿದರು. ಈ ಕುರಿತು ಸಿರವಾರ ತಹಸೀಲ್ದಾರ್ ಅಶೋಕ ಪವಾರ್ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು. ಮನವಿಗೆ ಸ್ಪಂದಿಸಿದ ಅಧಿಕಾರಿಗಳು 15 ದಿನಗಳೊಳಗೆ ಕಾಲುವೆಗೆ ನೀರು ಹರಿಸುವುದಾಗಿ ಭರವಸೆ ನೀಡಿದರು ಎಂದು ರೈತರು ತಿಳಿಸಿದರು.

ನಿಗದಿತ ಅವಧಿಯಲ್ಲಿ ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ವಹಿಸಿದರೆ ಸೆ.20ರಂದು ಕವಿತಾಳ ಬಂದ್‌ಗೆ ಕರೆ ನೀಡಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಬಸನಗೌಡ ಬ್ಯಾಗವಾಟ, ರೈತ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಅಮರೇಶ ಚಾಗಬಾವಿ, ಯಮನಪ್ಪ ದಿನ್ನಿ, ಅದನಗೌಡ ಹಣಗಿ, ತಿಮ್ಮನಗೌಡ ಹಣಗಿ, ಶರಣಪ್ಪ ಪಾತಪುರ, ಗಂಗಾಧರ ಸ್ವಾಮಿ, ಚಂದ್ರಶೇಖರ, ದುರುಗಪ್ಪ ಹಿಂದಿನಮನೆ, ಶಿವರಾಜ್ ನಾಯಕ, ಹೆಚ್. ಬಸವರಾಜ, ರಾಮಣ್ಣ ಹಣಗಿ, ಮಲ್ಲಯ್ಯ ಹಣಗಿ, ಆದಪ್ಪ, ಮೌನೇಶ, ಮೈಬುಸಾಬು, ನಾಗರಾಜ ಗೊಲ್ಲದಿನ್ನಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಜಿಲ್ಲಾಧಿಕಾರಿ ಪೂವಿತಾ ಎಸ್. ಕರೆ

ಟ್ಯಾಂಕ್/ಕಟ್ಟೆ ಮತ್ತು ಕೊಳಗಳಲ್ಲಿ ಮಾತ್ರ ವಿಸರ್ಜಿಸುವುದು ಮೂರ್ತಿಗಳ ವಿಸರ್ಜನೆಯ ಸಮಯದಲ್ಲಿ ಹೂವು ಹಾಗೂ ಇನ್ನಿತರ ಪೂಜಾ ಸಾಮಾಗ್ರಿಗಳನ್ನು ಗೊತ್ತುಪಡಿಸಿದ ತಾತ್ಕಾಲಿಕ ಟ್ಯಾಂಕ್/ಕಟ್ಟೆ ಮತ್ತು ಕೊಳದ ದಡದಲ್ಲಿ ಇಟ್ಟಿರುವ ಬುಟ್ಟಿಗಳಲ್ಲಿ ಅಥವಾ ನಿಗಧಿತ ಜಾಗದಲ್ಲಿ ಹಾಕಲು ತಿಳಿಸಿದೆ.

ಸಾರ್ವಜನಿಕರು ಮನೆಗಳಲ್ಲಿ ಸ್ಥಾಪಿಸಲ್ಪಟ್ಟ ಮೂರ್ತಿಗಳ ವಿಸರ್ಜನೆಯ ಸಮಯದಲ್ಲಿ ಒಂದು ಬಕೆಟ್ ನೀರಿನಲ್ಲಿ ವಿಸರ್ಜಿಸುವ ಪದ್ಧತಿಯನ್ನು ರೂಢಿ ಮಾಡಿಕೊಳ್ಳುವುದು ಮತ್ತು ವಿಸರ್ಜನೆ ಮಾಡಲಾದ ಮಣ್ಣನ್ನು ಮನೆಗಳ ಆವರಣದಲ್ಲಿರುವ ಗಿಡಗಳ ಬದುಗಳಿಗೆ ಹಾಕುವುದು.

ಹಬ್ಬದ ಸಮಯದಲ್ಲಿ ಶಬ್ಧ ಮತ್ತು ವಾಯು ಮಾಲಿನ್ಯ ತಡೆಗೆ ಹೆಚ್ಚಿನ ಧ್ವನಿ ಹೊರಸೂಸುವ ಧ್ವನಿವರ್ಧಕ ಮತ್ತು ಪಟಾಕಿಗಳನ್ನು ಉಪಯೋಗಿಸಬೇಡಿ (ರಾತ್ರಿ ಸಮಯ 10.00 ಗಂಟೆಯಿದ ಬೆಳಿಗ್ಗೆ 06.00 ಗಂಟೆಯವರೆಗೆ ಧ್ವನಿವರ್ಧಕ/ಪಟಾಕಿಗಳ ಬಳಕೆಯನ್ನು ನಿಷೇಧಿಸಲಾಗಿದೆ).

ಈ ರೀತಿ ಈ ವರ್ಷ ಮಣ್ಣಿನ ಗಣೇಶ ಮೂರ್ತಿಗಳನ್ನು ಪೂಜಿಸುವುದರೊಂದಿಗೆ ರಾಯಚೂರು ಜಿಲ್ಲೆಯ ನೈಸರ್ಗಿಕ ಜಲಮೂಲಗಳು (ಕೆರೆ, ಬಾವಿ, ಕೊಳ, ನದಿ) ಕಲುಷಿತಗೊಳ್ಳದಂತೆ ಹಾಗೂ ಪ್ರಾಣಿ, ಪಕ್ಷಿ ಹಾಗೂ ಜಲಚರಗಳ ಜೀವಕ್ಕೆ ಅಪಾಯವಾಗದಂತೆ ಮತ್ತು ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆಯಾಗದಂತೆ ಪರಿಸರ ಸ್ನೇಹಿ ಗಣೇಶ ಹಬ್ಬವನ್ನು ಆಚರಿಸೋಣ ಎಂದು ರಾಯಚೂರು ಜಿಲ್ಲೆಯ ಸಮಸ್ತ ನಾಗರೀಕರಿಗೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯೋಜನೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕಾರ್ಯಕ್ಷೇತ್ರ ವೀಕ್ಷಣೆ ಮಾಡಿ: ಉಜ್ವಲ್ ಕುಮಾರ್ ಘೋಷ್

ಪ್ರಗತಿ ಕುಂಠಿತವಾಗದತೆ ನಿಗದಿತ ಗುರಿ ಸಾಧನೆಗೆ ಆದ್ಯತೆಯಾಗಿ ಕಾರ್ಯನಿರ್ವಹಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಮಹತ್ವಾಕಾಂಕ್ಷಿ ಕಾರ್ಯಕ್ರಮದ ಕೇಂದ್ರ ಸರಕಾರದ ಪ್ರಭಾರಿ ಜಿಲ್ಲಾ ಉಸ್ತುವಾರಿಗಳು ಸೂಚಿಸಿದರು.

ಮಹತ್ವಾಕಾಂಕ್ಷೆ ಯೋಜನೆಯ ಮಾರ್ಗಸೂಚಿಗಳನ್ನು ಸರಿಯಾಗಿ ಬಳಸಿಕೊಂಡು ಕೃಷಿ, ಆರೋಗ್ಯ, ಶಿಕ್ಷಣ, ಆರ್ಥಿಕ ಸಬಲೀಕರಣದ ಕುರಿತು ಹೆಚ್ಚಿನ ಕಾಳಜಿ ವಹಿಸಬೇಕು. ಪಿಮ್‌ಕೆಎಸ್‌ವೈ ಯೋಜನೆಯೆಡಿಯಲ್ಲಿ ಎಲ್ಲಾ ರೈತರಿಂದ ಬೆಳೆ ವಿಮೆ ಮಾಡಿಸಬೇಕು. ಜನರ ಆರೋಗ್ಯ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸಬೇಕು ಎಂದರು.

ಆಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಕಾರ್ಡ್ಗಳ ನೋಂದಣಿಯಲ್ಲಿ ಜಿಲ್ಲೆಯು ಉತ್ತಮ ಪ್ರಗತಿ ಕಾಣಬೇಕು. ಬಿಪಿಎಲ್ ಪಡಿತರ ಚೀಟಿ ಹೊಂದಿದ ಕುಟುಂಬಗಳಿಗೆ ಈ ಯೋಜನೆ ತುಂಬಾ ಉಪಯುಕ್ತವಾಗಿದ್ದು, ಜನರಲ್ಲಿ ಈ ಕುರಿತು ಹೆಚ್ಚಿನ ಜಾಗೃತಿ ಮೂಡಿಸಬೇಕು. ಅಲ್ಲದೆ ಜಿಲ್ಲೆಯಲ್ಲಿ ಕಡಿಮೆ ಫಲಿತಾಂಶ ಹೊಂದಿದ ಶಾಲೆಗಳನ್ನು ಗುರುತಿಸಿ, ಈ ಶಾಲೆಗಳಲ್ಲಿ ಫಲಿತಾಂಶ ಹೆಚ್ಚಳಕ್ಕಾಗಿ ವಿಶೇಷ ಕ್ರಮವಹಿಸಬೇಕೆಂದರು.

ಜಿಲ್ಲೆಯ ಮಕ್ಕಳಲ್ಲಿ ಅಪೌಷ್ಟಿಕತೆ, ಬಾಲ ಕಾರ್ಮಿಕ ಪದ್ದತಿ ಹಾಗೂ ಬಾಲ್ಯ ವಿವಾಹದಂತಹ ಸಾಮಾಜಿಕ ಪಿಡುಗನ್ನು ಹೋಗಲಾಡಿಸಲು ಸಂಬಧಿಸಿದ ಇಲಾಖೆಯ ಅಧಿಕಾರಿಗಳು ಎಚ್ಚರ ವಹಿಸಬೇಕೆಂದು ಸೂಚಿಸಿದರು.

ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಮಹತ್ವಾಕಾಂಕ್ಷಿ ಜಿಲ್ಲೆ ಯೋಜನೆಯಡಿ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಲಾಗಿದ್ದು, ಹಲವು ಸೂಚ್ಯಂಕಗಳಲ್ಲಿ ಉತ್ತಮ ಸ್ಥಾನಗಳಿಸಲಾಗಿದೆ. ಆರೋಗ್ಯ, ಪೌಷ್ಟಿಕತೆ, ಕೃಷಿ, ಜಲಸಂಪನ್ಮೂಲ, ಶಿಕ್ಷಣ, ಆರ್ಥಿಕತೆ, ಕೌಶಲಾಭಿವೃದ್ಧಿ ಹಾಗೂ ಮೂಲಸೌಕರ್ಯ ಸೇರಿದಂತೆ ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆ ಸೂಚ್ಯಂಕಗಳ ಅನುಷ್ಠಾನಕ್ಕೆ ಹೆಚ್ಚಿನ ಗಮನ ಹರಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್. ಅವರು ಮಾತನಾಡಿ, ಜಿಲ್ಲೆಯ ಸಾರ್ವಜನಿಕರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸಲು ತಜ್ಞ ವೈದ್ಯರ ಲಭ್ಯತೆ, ಖಾಲಿ ಹುದ್ದೆಗಳು ಮತ್ತು ಸಂಭಾವನೆಯ ಮೌಲ್ಯಮಾಪನವನ್ನು ಪ್ರಾರಂಭಿಸಲಾಗಿದೆ. ಕರ್ನಾಟಕ, ತಮಿಳುನಾಡು, ರಾಜಸ್ಥಾನ, ಕೇರಳ, ತೆಲಂಗಾಣ ಮತ್ತು ಆಂಧ್ರಪ್ರದೇಶದ ತುಲನಾತ್ಮಕ ಸಂಭಾವನೆಯ ವಿಶ್ಲೇಷಣೆಯನ್ನು ಸಿದ್ಧಪಡಿಸಲಾಗಿದೆ. ಸಂಭಾವನೆ ಹೆಚ್ಚಳಕ್ಕಾಗಿ ಪ್ರಸ್ತಾವನೆಯನ್ನು ಸಕ್ಷಮ ಪ್ರಾಧಿಕಾರದ ಮುಂದೆ ಇಡಲಾಗುತ್ತಿದೆ. ಅಲ್ಲದೆ ಮಕ್ಕಳ ತಜ್ಞರು, ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞರು ಹಾಗೂ ಅರಿವಳಿಕೆ ತಜ್ಞರ ನೇಮಕಾತಿಗೆ ಆದ್ಯತೆ ನೀಡಲು ಕ್ರಮ ವಹಿಸಲಾಗಿದೆ ಎಂದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಅವರು ಮತನಾಡಿ, ಮಕ್ಕಳ ಹಾಗೂ ತಾಯಂದಿರ ಆರೋಗ್ಯ ಸುಧಾರಿಸಲು ಪೋಷಣಾ ಅಭಿಯಾನದಡಿ 0-6 ವರ್ಷ ವಯಸ್ಸಿನ ಮಕ್ಕಳು, ಹದಿಹರೆಯದ ಹೆಣ್ಣುಮಕ್ಕಳು, ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರ ಮೇಲೆ ಕೇಂದ್ರೀಕರಿಸಲಾಗುತ್ತಿದೆ. ಮಕ್ಕಳಲ್ಲಿ ಅಪೌಷ್ಟಿಕತೆ, ಕಡಿಮೆ ತೂಕ ಮತ್ತು ರಕ್ತ ಹೀನತೆಯನ್ನು ಹೋಗಲಾಡಿಸಲು ಪೌಷ್ಟಿಕಾಂಶದ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಅಲ್ಲದೆ ಪೋಷಣ್ ಟ್ರಾಕ್ ಮೂಲಕ ಮಹಿಳೆಯರನ್ನು ಹಾಗೂ ಮಕ್ಕಳನ್ನು ಮೇಲುಸ್ತುವಾರಿ ಮಾಡಲಾಗುತ್ತದೆ. ಸರ್ಕಾರದ ಸೂಚನೆಯಂತೆ ಅಂಗನವಾಡಿ ಕೇಂದ್ರದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳ ಹಾಜರಾತಿಯನ್ನು ಬೈಯೋಮೆಟ್ರಿಕ್ ಮೂಲಕ ತೆಗೆದುಕೊಳ್ಳಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ ಚೌಹಣ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಮಹಮ್ಮದ್ ಅಲಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಧಕ ಸೋಮಶೇಖರಪ್ಪ ಹೋಕ್ರಾಣಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ್, ಮಹತ್ವಾಕಾಂಕ್ಷೆ ಜಿಲ್ಲೆ ಯೋಜನೆಯ ಜಿಲ್ಲಾ ಕೋ ಆರ್ಡಿನೇಟರ್ ಸೌಮ್ಯ ತಡಕಲ್, ರಂಜೀತ್ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಸಭೆಯಲ್ಲಿ ಇದ್ದರು.

## ಮೊದಲನೇ ಪುಟದಿಂದ

## ಉಪವಿಭಾಗದ ನೂತನ ಸಹಾಯಕ ಆಯುಕ್ತರಾಗಿ ನಾಗೇಂದ್ರ ಬಾಬು ಕುಮಾರ್ ಅಧಿಕಾರ ಸ್ವೀಕಾರ

ಲಿಂಗಸುಗೂರು, ಸೆ.8: ರಾಯಚೂರು ಜಿಲ್ಲೆಯ ಲಿಂಗಸುಗೂರು ಉಪವಿಭಾಗದ ನೂತನ ಸಹಾಯಕ ಆಯುಕ್ತರಾಗಿ ನಾಗೇಂದ್ರ ಬಾಬು ಕುಮಾರ್ ಅವರು ಇಂದು ಕರ್ತವ್ಯಕ್ಕೆ ಹಾಜರಾಗಿ ಅಧಿಕಾರ ಸ್ವೀಕರಿಸಲಿದ್ದಾರೆ.

ಸರ್ಕಾರದ ಇತ್ತೀಚಿನ ವರ್ಗಾವಣೆ ಆದೇಶದಂತೆ ನಾಗೇಂದ್ರ ಬಾಬು ಕುಮಾರ್ ಅವರನ್ನು ಲಿಂಗಸುಗೂರು ಉಪವಿಭಾಗದ ಸಹಾಯಕ ಆಯುಕ್ತರಾಗಿ ಸ್ಥಳನಿಯುಕ್ತಿಗೊಳಿಸಲಾಗಿದೆ. 2024ನೇ ಸಾಲಿನ ಕರ್ನಾಟಕ ವೃಂದದ ಭಾರತೀಯ ಆಡಳಿತ ಸೇವೆಯ ಅಧಿಕಾರಿಯಾಗಿರುವ ಅವರು ಎಂಜಿನಿಯರಿಂಗ್ ಪದವೀಧರರಾಗಿದ್ದು, ಯುಪಿಎಸ್‌ಸಿ ನಾಗರಿಕ ಸೇವಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಭಾರತೀಯ ಆಡಳಿತ ಸೇವೆಗೆ ಆಯ್ಕೆಯಾಗಿದ್ದಾರೆ.

ಲಿಂಗಸುಗೂರು ಉಪವಿಭಾಗದ ಆಡಳಿತದ ಹೊಣೆಗಾರಿಕೆ ವಹಿಸಿಕೊಳ್ಳಲಿರುವ ನಾಗೇಂದ್ರ ಬಾಬು ಕುಮಾರ್ ಅವರು ಕಂದಾಯ, ಭೂ ದಾಖಲೆ, ಸಾರ್ವಜನಿಕ ಅಹವಾಲು, ಜನಸ್ಪಂದನ ಸೇರಿದಂತೆ ವಿವಿಧ ಆಡಳಿತಾತ್ಮಕ ವಿಷಯಗಳ ನಿರ್ವಹಣೆಯಲ್ಲಿ ಪ್ರಮುಖ ಪಾತ್ರ ವಹಿಸಲಿದ್ದಾರೆ.

ನೂತನ ಸಹಾಯಕ ಆಯುಕ್ತರ ಅಧಿಕಾರ ಸ್ವೀಕಾರದೊಂದಿಗೆ ಉಪವಿಭಾಗದ ಆಡಳಿತ ವ್ಯವಸ್ಥೆಗೆ ಹೊಸ ಚೈತನ್ಯ ದೊರೆಯಲಿದೆ ಎಂಬ ನಿರೀಕ್ಷೆ ವ್ಯಕ್ತವಾಗಿದೆ.

## ಬಳ್ಳಾರಿ ಚಲೋ ಬದಲು ರಾಯಚೂರು ವಾರ್ಡ್‌ಗಳಲ್ಲಿ ಪಾದಯಾತ್ರೆ ಮಾಡಿ: ಬಂಗಿ ಮುನಿರೆಡ್ಡಿ

ನೀರಿನ ನಳಗಳಿಗೆ ಸೇರುತ್ತಿದೆ ಎಂಬ ಸಾರ್ವಜನಿಕರ ದೂರುಗಳಿದ್ದು, ಇದರಿಂದ ಜನರ ಆರೋಗ್ಯದ ಮೇಲೂ ದುಷ್ಪರಿಣಾಮ ಬೀರುತ್ತಿದೆ. ಕಲುಷಿತ ನೀರಿನಿಂದಾಗಿ ಅನೇಕರು ಅನಾರೋಗ್ಯಕ್ಕೀಡಾಗಿ ಆಸ್ಪತ್ರೆಗಳಿಗೆ ತೆರಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಕೆಲವು ವಾರ್ಡ್‌ಗಳಲ್ಲಿ ಚರಂಡಿಗಳು ಕಸದಿಂದ ತುಂಬಿಕೊಂಡು ದುರ್ವಾಸನೆ ಹರಡುತ್ತಿದ್ದು, ಸಾರ್ವಜನಿಕರು ದಿನನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ. ನಗರದಲ್ಲಿನ ಅನೇಕ ರಸ್ತೆಗಳು ಹದಗೆಟ್ಟು ತಗ್ಗು-ಗುಂಡಿಗಳಿಂದ ಕೂಡಿರುವುದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ಸಂಕಷ್ಟ ಎದುರಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ನಗರದ ಜನರು ಮೂಲಸೌಕರ್ಯ ಕೊರತೆಯಿಂದ ನಿರಂತರ ಸಮಸ್ಯೆಗಳನ್ನು ಎದುರಿಸುತ್ತಿದ್ದರೂ ಜನಪ್ರತಿನಿಧಿಗಳು, ಮಹಾನಗರ ಪಾಲಿಕೆ ಹಾಗೂ ಶಾಸಕರು ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಸ್ಪಂದನೆ ನೀಡುತ್ತಿಲ್ಲ ಎಂಬ ಭಾವನೆ ಸಾರ್ವಜನಿಕರಲ್ಲಿ ಮೂಡಿದೆ. ಆದ್ದರಿಂದ ನಗರ ಶಾಸಕರು ಪ್ರತಿ ವಾರ್ಡ್‌ಗೆ ಭೇಟಿ ನೀಡಿ ಅಲ್ಲಿನ ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ರಸ್ತೆ, ಚರಂಡಿ, ಕುಡಿಯುವ ನೀರು ಹಾಗೂ ಸ್ವಚ್ಛತೆ ಸಮಸ್ಯೆಗಳ ಪರಿಹಾರಕ್ಕೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಬಂಗಿ ಮುನಿರೆಡ್ಡಿ ಆಗ್ರಹಿಸಿದ್ದಾರೆ.

## ಶ್ರಾವಣದ ಭಕ್ತಿ, ಸುಗೂರೇಶ್ವರನ ಆಶೀರ್ವಾದ: ದೇವಸುಗೂರು ಅಭಿವೃದ್ಧಿಗೆ ಹೊಸ ಸಂಕಲ್ಪ

ಭಕ್ತರಿಗೆ ಅನುಕೂಲಕರ ವಾತಾವರಣ ನಿರ್ಮಿಸುವುದು ಹಾಗೂ ದೇವಸ್ಥಾನದ ಆವರಣವನ್ನು ಸುಸಜ್ಜಿತಗೊಳಿಸುವ ನಿಟ್ಟಿನಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ನಂತರ ಗ್ರಾಮದ ಭಕ್ತರು ಹಾಗೂ ಮುಖಂಡರೊಂದಿಗೆ ಶ್ರೀ ಸುಗೂರೇಶ್ವರ ಸ್ವಾಮಿಯ ಪಲ್ಲಕ್ಕಿ ಸೇವೆಯಲ್ಲಿ ಶಾಸಕ ಬಸನಗೌಡ ದದ್ದಲ್ ಭಾಗವಹಿಸಿದರು. ಭಕ್ತರೊಂದಿಗೆ ಪಲ್ಲಕ್ಕಿ ಸೇವೆಯಲ್ಲಿ ಪಾಲ್ಗೊಂಡು ದೇವರ ಆಶೀರ್ವಾದ ಪಡೆದರು. ದೇವಸ್ಥಾನದಲ್ಲಿ ಆಯೋಜಿಸಿದ್ದ ಪ್ರವಚನ ಕಾರ್ಯಕ್ರಮದಲ್ಲಿಯೂ ಭಾಗವಹಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಬಸನಗೌಡ ದದ್ದಲ್, ಶ್ರಾವಣ ಮಾಸವು ಶಿವನ ಆರಾಧನೆಗೆ ವಿಶೇಷವಾದ ಮಾಸವಾಗಿದೆ. ಕೊನೆಯ ಸೋಮವಾರದಂದು ಶ್ರೀ ಸುಗೂರೇಶ್ವರ ಸ್ವಾಮಿಯ ದರ್ಶನ ಪಡೆದು, ಭಕ್ತರೊಂದಿಗೆ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿರುವುದು ಸಂತೋಷ ಹಾಗೂ ಪುಣ್ಯದ ಅನುಭವ ನೀಡಿದೆ ಎಂದರು.

ದೇವಸುಗೂರಿನ ಶ್ರೀ ಸುಗೂರೇಶ್ವರ ಸ್ವಾಮಿಯ ಕೃಪೆ ಮತ್ತು ಆಶೀರ್ವಾದ ಸದಾ ಎಲ್ಲರ ಮೇಲಿರಲಿ. ಕ್ಷೇತ್ರದ ಜನರಿಗೆ ಸುಖ, ಶಾಂತಿ, ಸಮೃದ್ಧಿ ದೊರೆಯಲಿ ಹಾಗೂ ರೈತರ ಬದುಕು ಹಸನಾಗಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು.

ದೇವಸ್ಥಾನದ ಅಭಿವೃದ್ಧಿಗೆ ಕೈಗೊಂಡಿರುವ ಕಾಮಗಾರಿಗಳ ಮೂಲಕ ಧಾರ್ಮಿಕ ಕ್ಷೇತ್ರಕ್ಕೆ ಅಗತ್ಯ ಸೌಲಭ್ಯಗಳನ್ನು ಒದಗಿಸುವುದರ ಜೊತೆಗೆ ದೇವಸುಗೂರು ಗ್ರಾಮದ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡುವ ಸಂಕಲ್ಪ ಹೊಂದಲಾಗಿದೆ ಎಂದು ಶಾಸಕ ಬಸನಗೌಡ ದದ್ದಲ್ ಹೇಳಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಭಕ್ತರು, ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಗಣೇಶೋತ್ಸವದಲ್ಲಿ ಶಾಂತಿ-ಸುವ್ಯವಸ್ಥೆಗೆ ಆದ್ಯತೆ ನೀಡಿ: ಎಸ್‌ಪಿ

ಹಬ್ಬವನ್ನು ಶಾಂತಿಯುತವಾಗಿ ಆಚರಿಸುವ ಮೂಲಕ ಜಿಲ್ಲೆಯಲ್ಲಿ ಉತ್ತಮ ವಾತಾವರಣ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಸಲಹೆ ನೀಡಿದರು.

ಗಣೇಶೋತ್ಸವದ ಸಂದರ್ಭದಲ್ಲಿ ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡುವುದರ ಜೊತೆಗೆ ಪೊಲೀಸ್ ಇಲಾಖೆಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅಗತ್ಯ ಸಂದರ್ಭಗಳಲ್ಲಿ ಮಾಹಿತಿ ನೀಡಬೇಕು. ಹಬ್ಬದ ಸಂಭ್ರಮದೊಂದಿಗೆ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಜವಾಬ್ದಾರಿಯನ್ನೂ ಎಲ್ಲರೂ ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಗಣೇಶ ಹಬ್ಬದ ಆಚರಣೆ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳು ಹಾಗೂ ಕಾನೂನು-ಸುವ್ಯವಸ್ಥೆ ಕಾಪಾಡುವ ಕುರಿತು ವಿವಿಧ ಸಮುದಾಯಗಳ ಮುಖಂಡರು ಮತ್ತು ಗಣೇಶ ಮಂಡಳಿಗಳ ಮುಖ್ಯಸ್ಥರಿಗೆ ಪೊಲೀಸ್ ಇಲಾಖೆಯಿಂದ ಅಗತ್ಯ ಸಲಹೆ-ಸೂಚನೆಗಳನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ರಾಯಚೂರು ಹೆಚ್ಚುವರಿ ಪೊಲೀಸ್ ಅಧೀಕ್ಷಕ ಜಿ. ಹರೀಶ್, ಉಪ ಪೊಲೀಸ್ ಅಧೀಕ್ಷಕ ಶಾಂತವೀರ ಸೇರಿದಂತೆ ವಿವಿಧ ಸಮುದಾಯಗಳ ಮುಖಂಡರು ಹಾಗೂ ಗಣೇಶ ಮಂಡಳಿಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

## ಗೌರಿ-ಗಣೇಶ ಹಬ್ಬ ಶಾಂತಿಯುತ ಆಚರಣೆಗೆ ಸಾರ್ವಜನಿಕರ ಸಹಕಾರ ಅಗತ್ಯ: ಎಸ್‌ಪಿ ಅರುಣಾಂಗ್ಷು ಗಿರಿ

ಪ್ರತಿಷ್ಠಾಪಿಸುವ ನಿರೀಕ್ಷೆ ಇದೆ. ಪ್ರತಿಯೊಂದು ಗಣೇಶ ಪೆಂಡಾಲ್‌ನಲ್ಲಿ ಸ್ವಯಂಸೇವಕರು ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು. ಅಗ್ನಿ ಅವಘಡಕ್ಕೆ ಕಾರಣವಾಗಬಹುದಾದ ವಸ್ತುಗಳನ್ನು ಬಳಸಬಾರದು. ಮುನ್ನೆಚ್ಚರಿಕಾ ಕ್ರಮವಾಗಿ ಅಗ್ನಿಶಾಮಕ ಉಪಕರಣಗಳು ಹಾಗೂ ಪ್ರಥಮ ಚಿಕಿತ್ಸಾ ಕಿಟ್‌ಗಳನ್ನು ಕಡ್ಡಾಯವಾಗಿ ಇಟ್ಟುಕೊಳ್ಳಬೇಕು ಎಂದು ಸೂಚಿಸಿದರು.

ಹಬ್ಬದ ಸಂದರ್ಭದಲ್ಲಿ ಧ್ವನಿವರ್ಧಕಗಳ ಬಳಕೆಯಲ್ಲಿಯೂ ನಿಗದಿತ ಶಬ್ದಮಿತಿಯನ್ನು ಪಾಲಿಸಬೇಕು. ಅತಿಯಾದ ಡಿಜೆ ಶಬ್ದದಿಂದ ವೃದ್ಧರು, ಮಕ್ಕಳು, ಮಹಿಳೆಯರು ಹಾಗೂ ರೋಗಿಗಳಿಗೆ ತೊಂದರೆಯಾಗುವ ಸಾಧ್ಯತೆ ಇರುವುದರಿಂದ ಕಡಿಮೆ ಶಬ್ದದ ಧ್ವನಿವರ್ಧಕಗಳನ್ನು ಮಾತ್ರ ಬಳಸಬೇಕು. ಸುರಕ್ಷತೆಯ ದೃಷ್ಟಿಯಿಂದ ಆರೋಗ್ಯ ಇಲಾಖೆಯಿಂದ ಅಗತ್ಯ ಅಂಬ್ಯುಲೆನ್ಸ್ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಸಾರ್ವಜನಿಕ ಗಣೇಶೋತ್ಸವ ಸಮಿತಿಗಳು ನಿಯಮಾನುಸಾರ ಕಂದಾಯ ಇಲಾಖೆ, ಪುರಸಭೆ, ಪೊಲೀಸ್ ಇಲಾಖೆ ಹಾಗೂ ಜೆಸ್ಕಾಂ ಸೇರಿದಂತೆ ಸಂಬಂಧಿಸಿದ ಇಲಾಖೆಗಳ ಪರವಾನಗಿ ಪಡೆಯಲು ಅನುಕೂಲವಾಗುವಂತೆ ಪೊಲೀಸ್ ಠಾಣೆಯಲ್ಲಿ ಏಕಗವಾಕ್ಷಿ ವ್ಯವಸ್ಥೆ ಮಾಡಲಾಗುವುದು ಎಂದರು.

ಗಣೇಶ ಮೂರ್ತಿಗಳ ವಿಸರ್ಜನಾ ಮೆರವಣಿಗೆಯನ್ನು ಸಾಧ್ಯವಾದಷ್ಟು ಹಗಲಿನ ವೇಳೆ ನಡೆಸುವುದು ಸೂಕ್ತ. ರಾತ್ರಿ 9.30ರೊಳಗೆ ಗಣೇಶ ಮೂರ್ತಿಗಳ ವಿಸರ್ಜನಾ ಪ್ರಕ್ರಿಯೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಬೇಕು. ಕೋಮುಸೌಹಾರ್ದತೆ ಕಾಪಾಡಿಕೊಂಡು ಶಾಂತಿಯುತ, ಶಿಸ್ತಿನ ಹಾಗೂ ಅರ್ಥಪೂರ್ಣವಾಗಿ ಗಣೇಶ ಹಬ್ಬ ಆಚರಿಸಲು ಪೊಲೀಸ್ ಇಲಾಖೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಹೇಳಿದರು.

ಶಾಂತಿ ಸಭೆಯಲ್ಲಿ ತಹಶೀಲ್ದಾರ್ ಭೀಮರಾಯ ಬಿ. ರಾಮಸಮುದ್ರ, ಸಿಂಧನೂರು ಗ್ರಾಮೀಣ ಡಿವೈಎಸ್‌ಪಿ ಚಂದ್ರಶೇಖ್ರ, ಪಿಐ ಸೋಮಶೇಖರ ಎಸ್. ಕೆಂಚರೆಡ್ಡಿ ಹಾಗೂ ಹಿರಿಯ ಅಗ್ನಿಶಾಮಕ ಠಾಣಾಧಿಕಾರಿ ರಂಗಪ್ಪ ಮಾತನಾಡಿದರು.

ಮುಖಂಡ ರಾಜಾ ಸುಭಾಷ್ಚಂದ್ರ ಮಾತನಾಡಿ, ಗಣೇಶ ಹಬ್ಬ ನಡೆಯುವ ದಿನಗಳಲ್ಲಿ ತಾಲೂಕಿನಲ್ಲಿ ಸಂಪೂರ್ಣ ಮದ್ಯನಿಷೇಧ ಜಾರಿಗೊಳಿಸಬೇಕು. ಗಣೇಶ ಮೂರ್ತಿಗಳ ವಿಸರ್ಜನೆ ನಡೆಯುವ ಪಟ್ಟಣದ ಹಿರೇಬಾವಿಯಲ್ಲಿ ಸೂಕ್ತ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿದರು.

ಹನುಮೇಶ ನಾಯಕ ಸಾದಪೂರ ಮಾತನಾಡಿ, ಪಟ್ಟಣದ ಎಲ್ಲಾ ಸಮುದಾಯದವರು ಒಗ್ಗಟ್ಟಿನಿಂದ ಒಂದೇ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಿ ವೈಭವದಿಂದ ಹಬ್ಬ ಆಚರಿಸಿದಲ್ಲಿ ಸೌಹಾರ್ದತೆ ಇನ್ನಷ್ಟು ಬಲವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಹಿರಿಯ ವಕೀಲ ಎ.ಬಿ. ಉಪ್ಪಳಮಠ, ರಾಮಣ್ಣ ನಾಯಕ, ಮ್ಯಾಕಲ್ ಅಯ್ಯಪ್ಪ ನಾಯಕ, ವಿಜಯೇಂದ್ರ ಇಬ್ರಾಂಪುರ, ಜೆ. ಸುಧಾರ್ಕ್ರ ಶ್ರೀಕಾಂತ ಗೂಳಿ, ರೆಹಮತ್ ಅಲಿ ಸೇರಿದಂತೆ ತಾಲೂಕಿನ ವಿವಿಧ ಸಾರ್ವಜನಿಕ ಗಣೇಶೋತ್ಸವ ಸಮಿತಿಗಳ ಪದಾಧಿಕಾರಿಗಳು ಹಾಗೂ ಮುಖಂಡರು ಭಾಗವಹಿಸಿದ್ದರು.

# ರಾಜಕಾಲುವೆ ಸ್ವಚ್ಛಗೊಳಿಸದಿದ್ದರೆ ಉಗ್ರ ಹೋರಾಟ: ರಾಮನಗೌಡ ಏಗನೂರು ಎಚ್ಚರಿಕೆ



ರಾಯಚೂರು: ನಗರದ ವಾರ್ಡ್ ನಂ.23ರ ಸರದಾರ್ ವಲ್ಲಭಭಾಯಿ ಪಟೇಲ್ ವೃತ್ತದಿಂದ ಗದ್ವಾಲ್ ರಸ್ತೆಗೆ ಸಂಪರ್ಕ ಕಲ್ಪಿಸುವ ಮಡ್ಡಿಪೇಟೆಯ ವಾಟರ್ ಟ್ಯಾಂಕ್ ಸಮೀಪದ ರಾಜಕಾಲುವೆ ಕಸ-ಕಡ್ಡಿ ಹಾಗೂ ಪ್ಲಾಸ್ಟಿಕ್ ತ್ಯಾಜ್ಯದಿಂದ ತುಂಬಿ ತುಳುಕುತ್ತಿದ್ದು, ಕೂಡಲೇ ಸ್ವಚ್ಛಗೊಳಿಸಿ ಜನರ ಆರೋಗ್ಯ ಮತ್ತು ಸುರಕ್ಷತೆಗೆ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಸಾರ್ವಜನಿಕರನ್ನು ಒಗ್ಗೂಡಿಸಿಕೊಂಡು ಉಗ್ರ ಹೋರಾಟ ನಡೆಸಲಾಗುವುದು ಎಂದು ಜೆಡಿಎಸ್ ಮುಖಂಡ ರಾಮನಗೌಡ ಏಗನೂರು ಎಚ್ಚರಿಸಿದರು.

ಮಡ್ಡಿಪೇಟೆಯ ವಾಟರ್ ಟ್ಯಾಂಕ್ ಸಮೀಪವಿರುವ ರಾಜಕಾಲುವೆ ಪ್ರದೇಶಕ್ಕೆ ಭೇಟಿ ನೀಡಿ ಅಲ್ಲಿನ ನಿವಾಸಿಗಳ ಸಮಸ್ಯೆಗಳನ್ನು ಆಲಿಸಿದ ಅವರು, ಕಾಲುವೆಯ ಸ್ಥಿತಿಯನ್ನು ವೀಕ್ಷಿಸಿ ಮಹಾನಗರ ಪಾಲಿಕೆ ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಕಾರ್ಯವೈಖರಿಯ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ರಾಜಕಾಲುವೆಯಲ್ಲಿ ಕಸ-ಕಡ್ಡಿ, ಪೇಪರ್, ಪ್ಲಾಸ್ಟಿಕ್ ಸೇರಿದಂತೆ ವಿವಿಧ ರೀತಿಯ ತ್ಯಾಜ್ಯ ಅಪಾರ ಪ್ರಮಾಣದಲ್ಲಿ ಸಂಗ್ರಹವಾಗಿದೆ. ಇದರಿಂದ ಕಾಲುವೆಯ ಆಳವೇ ಕಾಣದಂತಹ ಸ್ಥಿತಿ ನಿರ್ಮಾಣವಾಗಿದೆ. ಮಕ್ಕಳು ಆಟವಾಡುತ್ತಾ ಆಕಸ್ಮಿಕವಾಗಿ ಕಾಲುವೆಗೆ ಬಿದ್ದರೆ ಅಥವಾ ದನ-ಕರುಗಳು ಮೇಯುತ್ತಾ ಜಾರಿ ಬಿದ್ದರೆ ತಕ್ಷಣ ಗಮನಕ್ಕೆ ಬಾರದಷ್ಟು ಕಸ ತುಂಬಿಕೊಂಡಿದೆ. ಇದು ಸಾರ್ವಜನಿಕರ ಸುರಕ್ಷತೆಗೆ ಗಂಭೀರ ಅಪಾಯವನ್ನುಂಟು ಮಾಡುತ್ತಿದೆ ಎಂದು ಅವರು ಆರೋಪಿಸಿದರು.

ರಾಜಕಾಲುವೆಯ ಮಧ್ಯೆಯೇ ಕುಡಿಯುವ ನೀರು ಪೂರೈಸುವ ಪೈಪ್‌ಗಳು ಹಾದುಹೋಗಿದ್ದು, ಕೆಲವೆಡೆ ಅವುಗಳಲ್ಲಿ ಸೋರಿಕೆ ಕಂಡುಬರುತ್ತಿದೆ. ಸೋರಿಕೆಯಾಗುತ್ತಿರುವ ಸ್ಥಳಗಳಲ್ಲಿ ಶಾಶ್ವತ ದುರಸ್ತಿ ಮಾಡುವ ಬದಲು ಬಟ್ಟೆ ಹಾಗೂ ರಬ್ಬರ್ ಸುತ್ತಿ ತಾತ್ಕಾಲಿಕವಾಗಿ ಸರಿಪಡಿಸಿರುವಂತೆ ಕಾಣುತ್ತಿದೆ ಎಂದು ರಾಮನಗೌಡ ಏಗನೂರು ದೂರಿದರು.

ಇಂತಹ ಪೈಪ್‌ಗಳಲ್ಲಿ ಸೋರಿಕೆ ಮುಂದುವರಿದರೆ ಕಾಲುವೆಯ ಕೊಳಚೆ ನೀರು ಕುಡಿಯುವ ನೀರಿನ ಪೈಪ್‌ಗೆ ಸೇರುವ ಅಪಾಯವಿದೆ. ಇದರಿಂದ ಸಾರ್ವಜನಿಕರಿಗೆ ಕಲುಷಿತ ನೀರು ಪೂರೈಕೆಯಾಗುವ ಸಾಧ್ಯತೆ ಇದ್ದು, ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಆತಂಕ ಇದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಪೈಪ್‌ಗಳ ದುರಸ್ತಿ ಹಾಗೂ ಕಾಲುವೆ ಸ್ವಚ್ಛತೆಗೆ ಮುಂದಾಗಬೇಕು ಎಂದು ಒತ್ತಾಯಿಸಿದರು.

ಕಲುಷಿತ ಪರಿಸರ ಹಾಗೂ ನಿಂತ ಕೊಳಚೆ ನೀರಿನಿಂದ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿ ಡೆಂಗ್ಯೂ ಸೇರಿದಂತೆ ವಿವಿಧ ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಬಹುದು. ಜನರು ಅನಾರೋಗ್ಯಕ್ಕೀಡಾದ ನಂತರ ಕ್ರಮ ಕೈಗೊಳ್ಳುವುದಕ್ಕಿಂತ ಮುನ್ನವೇ ಮುಂಜಾಗ್ರತಾ ಕ್ರಮ ವಹಿಸುವುದು ಮಹಾನಗರ ಪಾಲಿಕೆಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ನಗರದ ಸ್ಥಳೀಯ ಶಾಸಕರಾದ ಡಾ. ಶಿವರಾಜ ಪಾಟೀಲ, ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಸೇರಿದಂತೆ ಜನಪ್ರತಿನಿಧಿಗಳು ನಗರದ ಇಂತಹ ಮೂಲಭೂತ ಸಮಸ್ಯೆಗಳತ್ತ ಗಮನಹರಿಸಬೇಕು. ಜನರು ಪ್ರತಿನಿತ್ಯ ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ಕಲ್ಪಿಸುವುದು ಜನಪ್ರತಿನಿಧಿಗಳ ಮೊದಲ ಆದ್ಯತೆಯಾಗಬೇಕು ಎಂದು ರಾಮನಗೌಡ ಏಗನೂರು ಆಗ್ರಹಿಸಿದರು.

"ನಗರದ ಮಧ್ಯಭಾಗದಲ್ಲೇ ರಾಜಕಾಲುವೆ ಈ ಸ್ಥಿತಿಯಲ್ಲಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಗಮನಿಸಿಲ್ಲವೇ? ಜಿಲ್ಲಾಧಿಕಾರಿಗಳು ಹಾಗೂ ಮಹಾನಗರ ಪಾಲಿಕೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿಲ್ಲವೇ? ಮೂಲಭೂತ ಸ್ವಚ್ಛತೆಯೇ ಇಲ್ಲದಿದ್ದರೆ ಮಹಾನಗರ ಪಾಲಿಕೆ ಎಂಬ ಹೆಸರಿನ ಅರ್ಥವೇನು?" ಎಂದು ಪ್ರಶ್ನಿಸಿದರು.

ನಗರವನ್ನು ಕ್ಲೀನ್ ಸಿಟಿಗ್ರೀನ್ ಸಿಟಿಯಾಗಿ ರೂಪಿಸುವುದಾಗಿ ಹೇಳಲಾಗುತ್ತದೆ. ಆದರೆ ರಾಜಕಾಲುವೆಗಳು ತ್ಯಾಜ್ಯದಿಂದ ತುಂಬಿ, ಕುಡಿಯುವ ನೀರಿನ ಪೈಪ್‌ಗಳು ಕೊಳಚೆ ನೀರಿನ ಮಧ್ಯೆ ಹಾದುಹೋಗುತ್ತಿದ್ದರೆ ಇದನ್ನೇ ಕ್ಲೀನ್ ಸಿಟಿ, ಗ್ರೀನ್ ಸಿಟಿ ಎನ್ನಬೇಕೇ ಎಂದು ವ್ಯಂಗ್ಯವಾಡಿದರು.

ನಗರಕ್ಕೆ ಆಗಮಿಸುವ ಸಚಿವರು ಹಾಗೂ ಹಿರಿಯ ಜನಪ್ರತಿನಿಧಿಗಳು ಕೇವಲ ಸಭೆ-ಸಮಾರಂಭಗಳಿಗೆ ಸೀಮಿತರಾಗದೆ ಇಂತಹ ಸಮಸ್ಯಾತ್ಮಕ ಪ್ರದೇಶಗಳಿಗೂ ಭೇಟಿ ನೀಡಿ ವಾಸ್ತವ ಪರಿಸ್ಥಿತಿಯನ್ನು ಅರಿಯಬೇಕು. ಮಡ್ಡಿಪೇಟೆಯ ರಾಜಕಾಲುವೆಗೆ ಭೇಟಿ ನೀಡಿದರೆ ನಗರದ ಸ್ವಚ್ಛತೆಯ ನೈಜ ಚಿತ್ರಣ ಗೊತ್ತಾಗುತ್ತದೆ ಎಂದು ಅವರು ಹೇಳಿದರು.

ರಾಜಕಾರಣಕ್ಕೆ ಬರುವುದು ಹಾಗೂ ಜನಪ್ರತಿನಿಧಿಯಾಗುವುದು ವೈಯಕ್ತಿಕ ಹಿತಾಸಕ್ತಿಗಾಗಿ ಅಲ್ಲ. ಜನರು ಎದುರಿಸುತ್ತಿರುವ ಕುಡಿಯುವ ನೀರು, ರಸ್ತೆ, ಒಳಚರಂಡಿ, ಸ್ವಚ್ಛತೆ ಹಾಗೂ ಆರೋಗ್ಯ ಸಂಬಂಧಿತ ಸಮಸ್ಯೆಗಳಿಗೆ ಸ್ಪಂದಿಸಿ ಪರಿಹಾರ ಕಲ್ಪಿಸುವುದೇ ಜನಪ್ರತಿನಿಧಿಗಳ ಕರ್ತವ್ಯ ಎಂದು ರಾಮನಗೌಡ ಏಗನೂರು ಹೇಳಿದರು.

ನಗರದ ರಾಜಕಾಲುವೆಗಳ ಸಮಗ್ರ ಸ್ವಚ್ಛತೆ ಕೈಗೊಳ್ಳಬೇಕು. ಕಾಲುವೆಗಳಲ್ಲಿ ಸಂಗ್ರಹವಾಗಿರುವ ಪ್ಲಾಸ್ಟಿಕ್ ಹಾಗೂ ಘನತ್ಯಾಜ್ಯ ತೆರವುಗೊಳಿಸಬೇಕು. ಕುಡಿಯುವ ನೀರಿನ ಪೈಪ್‌ಗಳಲ್ಲಿ ಎಲ್ಲೆಲ್ಲಿ ಸೋರಿಕೆಯಿದೆಯೋ ಗುರುತಿಸಿ ವೈಜ್ಞಾನಿಕವಾಗಿ ದುರಸ್ತಿಗೊಳಿಸಬೇಕು. ಸಾರ್ವಜನಿಕರಿಗೆ ಶುದ್ಧ ಕುಡಿಯುವ ನೀರು ದೊರೆಯುವಂತೆ ಮಹಾನಗರ ಪಾಲಿಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

"ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಎಚ್ಚೆತ್ತುಕೊಂಡು ರಾಜಕಾಲುವೆ ಸ್ವಚ್ಛತೆ ಹಾಗೂ ಕುಡಿಯುವ ನೀರಿನ ಪೈಪ್‌ಗಳ ದುರಸ್ತಿಗೆ ಕ್ರಮ ಕೈಗೊಳ್ಳದಿದ್ದರೆ, ಸ್ಥಳೀಯ ನಿವಾಸಿಗಳನ್ನು ಒಗ್ಗೂಡಿಸಿಕೊಂಡು ಶಾಸಕರು, ವಿಧಾನ ಪರಿಷತ್ ಸದಸ್ಯರು, ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಮಹಾನಗರ ಪಾಲಿಕೆ ಮುಂದೆ ಉಗ್ರ ಪ್ರತಿಭಟನೆ ನಡೆಸಲಾಗುವುದು" ಎಂದು ರಾಮನಗೌಡ ಏಗನೂರು ಎಚ್ಚರಿಸಿದರು.

# ದಸರಾ ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ಸ್ವಾಮಿ ವಿವೇಕಾನಂದ ವಿದ್ಯಾ ಸಂಸ್ಥೆಗೆ ದ್ವಿತೀಯ ಬಹುಮಾನ




ರಾಯಚೂರು: ದಸರಾ ಅಂಗವಾಗಿ ನಡೆದ ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ರಾಯಚೂರಿನ ಸ್ವಾಮಿ ವಿವೇಕಾನಂದ ವಿದ್ಯಾ ಸಂಸ್ಥೆಯ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ದ್ವಿತೀಯ ಬಹುಮಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಶಿಕ್ಷಕ ವೃಂದ ಹಾಗೂ ಸಿಬ್ಬಂದಿ ಸಂತಸ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದರು. ಶಾಲೆಯ ವಿದ್ಯಾರ್ಥಿಗಳು ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಶಾಲಾ ಆಡಳಿತ ಮಂಡಳಿ ತಿಳಿಸಿದೆ.

ವಿದ್ಯಾರ್ಥಿಗಳ ಸಾಧನೆಗೆ ಶಾಲೆಯ ಅಧ್ಯಕ್ಷ ಎಂ.ಆರ್. ನರಸಯ್ಯ ಶೆಟ್ಟಿ, ಉಪಾಧ್ಯಕ್ಷ ಸತ್ಯನಾರಾಯಣ, ಕಾರ್ಯದರ್ಶಿ ಕಟ್ಕಂ ಅಂಬರೀಶ್, ಖಜಾಂಚಿ ವೆಂಕಟರಾಜುಗುಪ್ತ, ಮುಖ್ಯೋಪಾಧ್ಯಾಯರಾದ ವನಿತಾ ಮತ್ತು ವೀಣಾ, ಗಾಯತ್ರಿ, ದೈಹಿಕ ಶಿಕ್ಷಕ ನಾಗರಾಜ್ ಹಾಗೂ ಶಾಲೆಯ ಆಡಳಿತ ಮಂಡಳಿ ಸದಸ್ಯರು ಮತ್ತು ಶಿಕ್ಷಕ ವೃಂದ ಅಭಿನಂದಿಸಿ ಶುಭ ಹಾರೈಸಿದರು.

ಮುಂದಿನ ದಿನಗಳಲ್ಲಿಯೂ ವಿದ್ಯಾರ್ಥಿಗಳು ಇನ್ನಷ್ಟು ಪರಿಶ್ರಮದಿಂದ ವಿವಿಧ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಶಾಲೆ ಹಾಗೂ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಬೇಕು ಎಂದು ಅವರು ಆಶಿಸಿದರು.

# ಸಂಗೀತ ಭಾವನೆಗಳ ಸುಂದರ ಅಭಿವ್ಯಕ್ತಿ: ಚಲನಚಿತ್ರ ನಿರ್ದೇಶಕ ವಿ. ಮನೋಹರ್



ರಾಯಚೂರು, ಸೆ.8: ಧ್ವನಿ, ಲಯ ಮತ್ತು ಮಾಧುರ್ಯಗಳ ಸುಂದರ ಸಂಯೋಜನೆಯೇ ಸಂಗೀತ. ಯಾವುದೇ ಭಾಷೆಯ ಹಂಗಿಲ್ಲದೆ ಎಲ್ಲರ ಮನಸ್ಸಿಗೂ ತಲುಪುವ ಶಕ್ತಿಯು ಸಂಗೀತಕ್ಕಿದೆ. ಸಂತೋಷ, ದುಃಖ, ಉತ್ಸಾಹ ಸೇರಿದಂತೆ ಪ್ರತಿಯೊಂದು ಭಾವನೆಯನ್ನು ಸರಳವಾಗಿ ವ್ಯಕ್ತಪಡಿಸುವ ಅತ್ಯುತ್ತಮ ಮಾಧ್ಯಮ ಸಂಗೀತವಾಗಿದೆ ಎಂದು ಕನ್ನಡ ಚಲನಚಿತ್ರ ನಿರ್ದೇಶಕ ವಿ. ಮನೋಹರ್ ಹೇಳಿದರು.

ನಗರದ ರಂಗಮಂದಿರದಲ್ಲಿ ರವಿವಾರ ಸಂಜೆ ಆಕಾಶ್ ಸಿಂಗಿಂಗ್ ಸ್ಟುಡಿಯೋ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಗಾಯನ ಸ್ಪರ್ಧೆ ಸೀಸನ್-2 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂಗೀತವು ಮನಸ್ಸಿನ ಒತ್ತಡವನ್ನು ಕಡಿಮೆ ಮಾಡಿ ಅಲಕ್ಷ್ಯವನ್ನು ದೂರ ಮಾಡುವ ಶಕ್ತಿ ಹೊಂದಿದೆ ಎಂದರು.

ಸಂಗೀತ ಮತ್ತು ಕಲಾ ಕ್ಷೇತ್ರವನ್ನು ಜೀವಂತವಾಗಿಡಲು ಇಂತಹ ಸ್ಪರ್ಧೆಗಳು ನಿರಂತರವಾಗಿ ನಡೆಯಬೇಕು. ಸ್ಪರ್ಧಾತ್ಮಕ ವೇದಿಕೆಗಳು ಹೊಸ ಪ್ರತಿಭೆಗಳನ್ನು ಹೊರತರುವುದರ ಜೊತೆಗೆ ಗಾಯಕರಲ್ಲಿ ಇನ್ನಷ್ಟು ಕಲಿಯುವ ಆಸಕ್ತಿ ಮತ್ತು ಉತ್ಸಾಹವನ್ನು ಹೆಚ್ಚಿಸುತ್ತವೆ. ಸಂಗೀತಾಭ್ಯಾಸಕ್ಕೆ ಅಂತ್ಯವಿಲ್ಲ; ಕಲಾವಿದರು ನಿರಂತರವಾಗಿ ಕಲಿಯುತ್ತಲೇ ಇರಬೇಕು ಎಂದು ತಿಳಿಸಿದರು.

ವಿಶೇಷ ಅತಿಥಿಯಾಗಿ ಪಾಲ್ಗೊಂಡಿದ್ದ ಚಿತ್ರನಟಿ, ಸಮಾಜಸೇವಕಿ ಹಾಗೂ ವಸಂತ ಲಕ್ಷ್ಮಿ ಫೌಂಡೇಶನ್ ಅಧ್ಯಕ್ಷೆ ಡಾ. ಪೂಜಾ ರಮೇಶ್ ಮಾತನಾಡಿ, ಸಂಗೀತವು ಮನಸ್ಸಿನ ಆತಂಕವನ್ನು ದೂರ ಮಾಡಿ ನೆಮ್ಮದಿಯನ್ನು ನೀಡುತ್ತದೆ. ನೋವಿನಲ್ಲಿರುವ ಹೃದಯಕ್ಕೆ ಸಂಗೀತ ಉತ್ತಮ ಔಷಧಿಯಂತೆ ಕೆಲಸ ಮಾಡುತ್ತದೆ. ಮನಸ್ಸಿಗೆ ಚೈತನ್ಯ ತುಂಬುವ ಶಕ್ತಿ ಸಂಗೀತಕ್ಕಿದೆ ಎಂದು ಹೇಳಿದರು.

ಮಾರುತಿ ಬಡಿಗೇರ್ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಶಿವಲೀಲಾ ಕಾರ್ಯಕ್ರಮ ನಿರೂಪಿಸಿದರು.

ರಾಜ್ಯಮಟ್ಟದ ಗಾಯನ ಸ್ಪರ್ಧೆಯಲ್ಲಿ ರಾಯಚೂರಿನ ಅದ್ವೈತ ಪ್ರಥಮ ಸ್ಥಾನ ಪಡೆದು ₹11 ಸಾವಿರ ನಗದು ಬಹುಮಾನ ಹಾಗೂ ಪ್ರಮಾಣಪತ್ರ ಪಡೆದರು. ಸಿರವಾರದ ಪಾಂಡುರಂಗ ದ್ವಿತೀಯ ಸ್ಥಾನ ಪಡೆದು ₹5,500 ನಗದು ಬಹುಮಾನ ಪಡೆದರೆ, ಗುಲ್ಬರ್ಗದ ಯಶೋಧ ತೃತೀಯ ಸ್ಥಾನ ಪಡೆದು ₹3 ಸಾವಿರ ನಗದು ಬಹುಮಾನಕ್ಕೆ ಭಾಜನರಾದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 11 ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಡಿ. ಶ್ರೀನಿವಾಸ್, ಉಪಾಧ್ಯಕ್ಷ ಜಗದೀಶ, ರಾಮನಗೌಡ ಎಗನೂರು, ಬಿ. ಗೋವಿಂದ, ನರಸಪ್ಪ ಆಶಾಪುರ, ಡಾ. ರಘುಕಾಂತ ರೆಡ್ಡಿ, ಡಾ. ರಿಯಾಜ್, ಡಾ. ವರುಣ್ ಕರಿಯಪ್ಪ ನಾಯಕ, ಜೆ. ಸತ್ಯನಾಥ್, ಅಶ್ವಿನಿ ನರೇಂದ್ರ, ಚಿರಂಜೀವಿ ಯಾದವ್ ಹಾಗೂ ಆಕಾಶ್ ಸಿಂಗಿಂಗ್ ಕರೋಕೆ ಸ್ಟುಡಿಯೋ ಅಧ್ಯಕ್ಷ ಸುನಿಲ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಗುಡ್ಡದ ಬಸವೇಶ್ವರ ದೇವಸ್ಥಾನ ಅಭಿವೃದ್ಧಿಗೆ ಜನಪ್ರತಿನಿಧಿಗಳು ಮುಂದಾಗಲಿ




ದೇವದುರ್ಗ: ಭಕ್ತರು ದೇವರಲ್ಲಿ ಬೇಡಿಕೊಂಡ ಹರಕೆಗಳನ್ನು ಸಲ್ಲಿಸುವ ಮೂಲಕ ತಾಲೂಕಿನ ನಾಗಡದಿನ್ನಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯರಮರಸ್ ಗ್ರಾಮದಲ್ಲಿ ಗುಡ್ಡದ ಬಸವೇಶ್ವರ ಜಾತ್ರಾ ಮಹೋತ್ಸವ ಭಕ್ತಿಭಾವದಿಂದ ಜರುಗಿತು.

ಜಾತ್ರಾ ಮಹೋತ್ಸವ ಹಾಗೂ ಶಿವಾನುಭವ ಗೋಷ್ಠಿಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ನಿಲೋಗಲ್ ಮಠದ ಷ.ಬ್ರ. ಡಾ. ಪಂಚಾಕ್ಷರಿ ಶಿವಾಚಾರ್ಯರು, ಭಕ್ತರು ತನು-ಮನದಿಂದ ದೇವರ ಸೇವೆಯಲ್ಲಿ ಭಾಗವಹಿಸುತ್ತಿದ್ದಾರೆ. ಆದರೆ ದೇವಸ್ಥಾನದ ಸಮಗ್ರ ಅಭಿವೃದ್ಧಿಯೂ ಅಗತ್ಯವಾಗಿದೆ. ಕ್ಷೇತ್ರದ ಚುನಾಯಿತ ಜನಪ್ರತಿನಿಧಿಗಳು ಈ ನಿಟ್ಟಿನಲ್ಲಿ ಹೆಚ್ಚಿನ ಆಸಕ್ತಿ ತೋರಿಸಿ ದೇವಸ್ಥಾನದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಹೇಳಿದರು.

ಅನೇಕ ದೇವಸ್ಥಾನಗಳು ಅಭಿವೃದ್ಧಿಯಾಗುತ್ತಿರುವ ಸಂದರ್ಭದಲ್ಲಿ ಗುಡ್ಡದ ಬಸವೇಶ್ವರ ದೇವಸ್ಥಾನಕ್ಕೆ ವಿಶಾಲವಾದ ಜಾಗವಿದ್ದರೂ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿಯಾಗಿಲ್ಲ. ಇಚ್ಛಾಶಕ್ತಿಯಿಂದ ದೇವಸ್ಥಾನದ ಜೀರ್ಣೋದ್ಧಾರ ಹಾಗೂ ಸಮುದಾಯ ಭವನ ನಿರ್ಮಾಣಕ್ಕೆ ಮುಂದಾಗಬೇಕು. ಇದರಿಂದ ಭಕ್ತರಿಗೆ ಅಗತ್ಯ ಸೌಲಭ್ಯಗಳು ದೊರೆಯುವುದರ ಜೊತೆಗೆ ಧಾರ್ಮಿಕ ಚಟುವಟಿಕೆಗಳಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

ಕಲ್ಲೂರಿನ ಅಡಿವೇಶ್ವರ ಮಠದ ಶ್ರೀ ಶಂಭುಲಿಂಗ ಸ್ವಾಮಿಗಳು ಮಾತನಾಡಿ, ಸಂತರು, ಮಹಾತ್ಮರು ಹಾಗೂ ಧಾರ್ಮಿಕ ಪರಂಪರೆ ಮತ್ತು ಸಂಸ್ಕಾರಗಳಿಂದ ಭಾರತ ದೇಶಕ್ಕೆ ವಿಶಿಷ್ಟ ಗೌರವ ಬಂದಿದೆ. ಆದರೆ ಇತ್ತೀಚಿನ ದಿನಗಳಲ್ಲಿ ನಮ್ಮ ಸಂಸ್ಕೃತಿ ಮತ್ತು ಸಂಸ್ಕಾರಗಳಿಂದ ದೂರ ಸರಿಯುತ್ತಿರುವ ಪ್ರವೃತ್ತಿ ಕಂಡುಬರುತ್ತಿದೆ. ಮಕ್ಕಳಿಗೆ ತಂದೆ-ತಾಯಂದಿರು ಮನೆಯಲ್ಲಿಯೇ ಉತ್ತಮ ಸಂಸ್ಕಾರ ಕಲಿಸಬೇಕು ಎಂದು ಹೇಳಿದರು.

ಯುವಜನತೆ ದುಷ್ಚಟಗಳಿಗೆ ದಾಸರಾಗದಂತೆ ಕುಟುಂಬ ಮತ್ತು ಸಮಾಜ ಎಚ್ಚರಿಕೆ ವಹಿಸಬೇಕು. ಗ್ರಾಮದಲ್ಲಿನ ದೇವಾಲಯಗಳು ಉತ್ತಮವಾಗಿ ಅಭಿವೃದ್ಧಿಯಾದರೆ ಧಾರ್ಮಿಕ ವಾತಾವರಣ ಮತ್ತಷ್ಟು ಬಲಗೊಳ್ಳುತ್ತದೆ. ದೇವರಲ್ಲಿ ಕೇವಲ ಭೌತಿಕ ಸಂಪತ್ತನ್ನಷ್ಟೇ ಬೇಡದೆ, ಭಕ್ತಿ ಮತ್ತು ಜ್ಞಾನವನ್ನೂ ಪ್ರಾರ್ಥಿಸಬೇಕು ಎಂದು ಹೇಳಿದರು.

ದೇವದುರ್ಗ ಕ್ಷೇತ್ರದ ಶಾಸಕಿ ಕರೆಮ್ಮ ಜಿ. ನಾಯಕ ಅವರ ಪುತ್ರಿ ಗೌರಮ್ಮ ಮಾತನಾಡಿ, ಕ್ಷೇತ್ರದ ಸಮಸ್ಯೆಗಳ ಪರಿಹಾರಕ್ಕಾಗಿ ಶಾಸಕರು ಹಂತ ಹಂತವಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಯರಮರಸ್ ಗ್ರಾಮದ ಗುಡ್ಡದ ಬಸವೇಶ್ವರ ದೇವಸ್ಥಾನದ ಜೀರ್ಣೋದ್ಧಾರ ಹಾಗೂ ಸಮುದಾಯ ಭವನ ನಿರ್ಮಾಣಕ್ಕೆ ಅಗತ್ಯ ಅನುದಾನ ಕಲ್ಪಿಸುವ ಬೇಡಿಕೆಯನ್ನು ಶಾಸಕರ ಗಮನಕ್ಕೆ ತರುವುದಾಗಿ ತಿಳಿಸಿದರು.

ಜಾತ್ರೆಯ ಅಂಗವಾಗಿ ಬೆಳಗ್ಗೆಯಿಂದಲೇ ದೇವಸ್ಥಾನದಲ್ಲಿ ವಿವಿಧ ಪೂಜೆ-ಪುನಸ್ಕಾರ ಹಾಗೂ ಧಾರ್ಮಿಕ ಕೈಂಕರ್ಯಗಳು ಜರುಗಿದವು. ಸಂಜೆ ಚರಬಸವ ತಾತನವರು ಹಾಗೂ ಶ್ರೀಶೈಲ ತಾತನವರ ನೇತೃತ್ವದಲ್ಲಿ ಜೋಡು ಉಚ್ಚಯ್ಯ ಮಹೋತ್ಸವ ನೆರವೇರಿತು. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಗುಡ್ಡದ ಬಸವೇಶ್ವರನ ದರ್ಶನ ಪಡೆದು ಹರಕೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸುಲ್ತಾನಪುರದ ಶಂಭುಸೋಮನಾಥ ಶಿವಾಚಾರ್ಯರು, ಶರಣಪ್ಪಗೌಡ, ತಾಯಣ್ಣಗೌಡ, ಶಿವಶರಣಗೌಡ ಲಕ್ಕಂದಿನ್ನಿ, ಶ್ರೀಶೈಲ ಸ್ವಾಮಿ, ಶರಣಬಸವ ಪೊ.ಪಾ., ನಾಗರಾಜಗೌಡ, ಮಹಿಬೂಬಸಾಬ ಹೆಗ್ಗಡದಿನ್ನಿ, ದಾಕ್ಷಾಯಿಣಿ ಸೇರಿದಂತೆ ಗ್ರಾಮದ ಮುಖಂಡರು, ಭಕ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸತ್ಯದಿನೇಶ್ ಹುಟ್ಟುಹಬ್ಬ: ವಿದ್ಯಾರ್ಥಿಗಳಿಗೆ ಸೈಕಲ್, ಶಾಲೆಗೆ ಅಡುಗೆ ಸಾಮಗ್ರಿ ವಿತರಣೆ




ರಾಯಚೂರು: ಶ್ರೀ ಚಿಲುಕುರಿ ಸತ್ಯದಿನೇಶ್ ಅವರ ಹುಟ್ಟುಹಬ್ಬದ ಅಂಗವಾಗಿ ಅರಳಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಸೈಕಲ್ ವಿತರಣೆ, ಶಾಲೆಗೆ ಅಡುಗೆ ಸಾಮಗ್ರಿಗಳ ವಿತರಣೆ ಹಾಗೂ ಗಿಡ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸೈಕಲ್‌ಗಳನ್ನು ವಿತರಿಸಲಾಯಿತು. ಜೊತೆಗೆ ಶಾಲೆಯ ಬಳಕೆಗೆ ಅಗತ್ಯವಾದ ಅಡುಗೆ ಸಾಮಗ್ರಿಗಳನ್ನು ನೀಡಲಾಯಿತು. ಇದೇ ಸಂದರ್ಭದಲ್ಲಿ ಶಾಲಾ ಆವರಣದಲ್ಲಿ ಹೂವಿನ ಸಸಿಗಳು ಹಾಗೂ ಹಣ್ಣಿನ ಸಸಿಗಳನ್ನು ನೆಟ್ಟು, ಸಸಿಗಳನ್ನು ವಿತರಿಸಲಾಯಿತು.

ಸತ್ಯದಿನೇಶ್ ಅವರ ತಂದೆ ಹಾಗೂ ಉದ್ಯಮಿ ಮೋಹನ್ ರಾವ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಬಿಜೆಪಿ ಮುಖಂಡ ಕರಿಯಪ್ಪ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಸ್ಥಳೀಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಬೆಳ್ಳಿ ಮಹೋತ್ಸವ: ಪದವಿ ವಿದ್ಯಾರ್ಥಿಗಳಿಗೆ ಪ್ರಬಂಧ, ಭಾಷಣ ಸ್ಪರ್ಧೆ

ರಾಯಚೂರು: ಪತ್ರಕರ್ತರ ಹಿತಾಸಕ್ತಿ ಹಾಗೂ ಮಾಧ್ಯಮ ಕ್ಷೇತ್ರದ ಬೆಳವಣಿಗೆಗಾಗಿ ನಿರಂತರವಾಗಿ ಶ್ರಮಿಸುತ್ತಿರುವ ರಾಯಚೂರು ರಿಪೋರ್ಟರ್ಸ್ ಗಿಲ್ಡ್ (ರಿ.) ಸಂಸ್ಥೆಯು 25 ವರ್ಷಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಬೆಳ್ಳಿ ಮಹೋತ್ಸವದ ಅಂಗವಾಗಿ ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳಿಗಾಗಿ ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಯುವಜನರಲ್ಲಿ ಮಾಧ್ಯಮ ಕ್ಷೇತ್ರದಲ್ಲಾಗುತ್ತಿರುವ ಬದಲಾವಣೆಗಳು, ಪ್ರಜಾಪ್ರಭುತ್ವದಲ್ಲಿ ಮಾಧ್ಯಮಗಳ ಪಾತ್ರ, ಪತ್ರಿಕೋದ್ಯಮದ ನೈತಿಕತೆ ಹಾಗೂ ಸಾಮಾಜಿಕ ಮಾಧ್ಯಮಗಳಿಂದ ಎದುರಾಗುತ್ತಿರುವ ಸವಾಲುಗಳ ಕುರಿತು ಚಿಂತನೆ ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ಸೆ.11ರಂದು ನಗರದ ಪತ್ರಿಕಾ ಭವನದ ಮೇಲ್ಮಹಡಿಯಲ್ಲಿ ಪ್ರಬಂಧ ಸ್ಪರ್ಧೆ ನಡೆಯಲಿದ್ದು, ಮಾಧ್ಯಮಗಳು ಮತ್ತು ಪ್ರಜಾಪ್ರಭುತ್ವ: ಇಂದಿನ ಸವಾಲುಗಳು ಹಾಗೂ ನೈತಿಕತೆ ಎಂಬ ವಿಷಯದ ಕುರಿತು ವಿದ್ಯಾರ್ಥಿಗಳು ಪ್ರಬಂಧ ಮಂಡಿಸಬೇಕಾಗಿದೆ.

ಸೆ.12ರಂದು ಭಾಷಣ ಸ್ಪರ್ಧೆಯನ್ನು ಆಯೋಜಿಸಲಾಗಿದ್ದು, ಸಾಮಾಜಿಕ ಮಾಧ್ಯಮಗಳು ಮತ್ತು ಜೆನ್ ಜಿ: ಜಾಗೃತಿಯೋ ಅಥವಾ ಗೊಂದಲವೋ? ಎಂಬ ವಿಷಯದ ಕುರಿತು ವಿದ್ಯಾರ್ಥಿಗಳು ತಮ್ಮ ವಿಚಾರಗಳನ್ನು ಮಂಡಿಸಲಿದ್ದಾರೆ.

ಪ್ರತಿ ಪದವಿ ಮಹಾವಿದ್ಯಾಲಯದಿಂದ ಪ್ರತಿ ಸ್ಪರ್ಧೆಗೆ ನಾಲ್ವರು ವಿದ್ಯಾರ್ಥಿಗಳು ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಪ್ರಬಂಧ ಹಾಗೂ ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾಗುವವರಿಗೆ ಪ್ರಥಮ ಬಹುಮಾನವಾಗಿ ₹5,000, ದ್ವಿತೀಯ ಬಹುಮಾನವಾಗಿ ₹3,000 ಹಾಗೂ ತೃತೀಯ ಬಹುಮಾನವಾಗಿ ₹2,000 ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

ನಗರ ಹಾಗೂ ಜಿಲ್ಲೆಯ ಪದವಿ ಮಹಾವಿದ್ಯಾಲಯಗಳು ತಮ್ಮ ವಿದ್ಯಾರ್ಥಿಗಳನ್ನು ಈ ಸ್ಪರ್ಧೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸಿ ಕಳುಹಿಸಿಕೊಡಬೇಕು. ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವದ ಸಂಭ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಲಾಗಿದೆ.

ಸ್ಪರ್ಧೆಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9148245011ಕ್ಕೆ ಸಂಪರ್ಕಿಸಬಹುದು ಎಂದು ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷ ವಿಜಯ್ ಜಾಗಟಗಲ್ ಹಾಗೂ ಪ್ರಧಾನ ಕಾರ್ಯದರ್ಶಿ ವೆಂಕಟೇಶ ಹೂಗಾರ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯಾಗವಾಟದಲ್ಲಿ ಶ್ರೀ ಭ್ರಮರಾಂಬ ಶ್ರೀಮಲ್ಲಿಕಾರ್ಜುನ ಸ್ವಾಮಿ ವೈಭವದ ರಥೋತ್ಸವ



ಮಾನ್ವಿ: ತಾಲೂಕಿನ ಬ್ಯಾಗವಾಟ ಗ್ರಾಮದಲ್ಲಿರುವ ಶ್ರೀಶೈಲ ಶ್ರೀ ಭ್ರಮರಾಂಬ ಶ್ರೀಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನದಲ್ಲಿ ಶ್ರಾವಣ ಮಂಗಳವಾರದ ಅಂಗವಾಗಿ ಜಾತ್ರಾ ಮಹೋತ್ಸವ ಭಕ್ತಿ, ಸಂಭ್ರಮ ಮತ್ತು ಸಡಗರದಿಂದ ನೆರವೇರಿತು.

ಜಾತ್ರಾ ಮಹೋತ್ಸವದ ಪ್ರಯುಕ್ತ ಬೆಳಿಗ್ಗೆಯಿಂದಲೇ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಶ್ರೀ ಭ್ರಮರಾಂಬ ಶ್ರೀಮಲ್ಲಿಕಾರ್ಜುನ ಸ್ವಾಮಿಯ ಮೂರ್ತಿಗೆ ವಿಶೇಷ ಅಭಿಷೇಕ ನೆರವೇರಿಸಿ, ಮಹಾಮಂಗಳಾರತಿ ಮಾಡಲಾಯಿತು. ಭಕ್ತರು ಸರದಿಯಲ್ಲಿ ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಸಂಜೆ ಉತ್ಸವ ಮೂರ್ತಿಗಳನ್ನು ಅಲಂಕರಿಸಿದ ಪಲ್ಲಕ್ಕಿಯಲ್ಲಿ ಪ್ರತಿಷ್ಠಾಪಿಸಿ ಗ್ರಾಮದಲ್ಲಿ ಮೆರವಣಿಗೆ ನಡೆಸಲಾಯಿತು. ನಂತರ ಉತ್ಸವ ಮೂರ್ತಿಗಳನ್ನು ತೇರಿನಲ್ಲಿ ಪ್ರತಿಷ್ಠಾಪಿಸಿ, ಸಾವಿರಾರು ಭಕ್ತರ ಜಯಘೋಷದ ನಡುವೆ ವೈಭವದಿಂದ ರಥೋತ್ಸವ ನೆರವೇರಿಸಲಾಯಿತು.

ಬ್ಯಾಗವಾಟ, ಕರೆಗುಡ್ಡ, ಜಾನೇಕಲ್, ನಕ್ಕುಂದಿ, ಮಲ್ಲದಗುಡ್ಡ, ಬಾಗಲವಾಡ, ತೋರಣದಿನ್ನಿ ಸೇರಿದಂತೆ ಸುತ್ತಮುತ್ತಲಿನ ವಿವಿಧ ಗ್ರಾಮಗಳಿಂದ ಸಾವಿರಾರು ಭಕ್ತರು ಆಗಮಿಸಿ ರಥೋತ್ಸವದಲ್ಲಿ ಪಾಲ್ಗೊಂಡು ಶ್ರೀ ಭ್ರಮರಾಂಬ ಶ್ರೀಮಲ್ಲಿಕಾರ್ಜುನ ಸ್ವಾಮಿಯ ದರ್ಶನ ಪಡೆದರು.

ಮಾಜಿ ಶಾಸಕ ಬಸವನಗೌಡ ಬ್ಯಾಗವಾಟ ಸೇರಿದಂತೆ ಗ್ರಾಮದ ಮುಖಂಡರು, ಹಿರಿಯರು ಹಾಗೂ ಗ್ರಾಮಸ್ಥರು ಜಾತ್ರಾ ಮಹೋತ್ಸವದಲ್ಲಿ ಭಾಗವಹಿಸಿದ್ದರು.

# ಇ-ಕೆವೈಸಿ ಮಾಡಿಸಲು ಸೆಪ್ಟಂಬರ್ 30ಕೊನೆಯ ದಿನ

ರಾಯಚೂರು ಸೆಪ್ಟಂಬರ್ 08 (ಕರ್ನಾಟಕ ವಾರ್ತೆ): ಪಡಿತರ ಚೀಟಿಯಲ್ಲಿನ ಸದಸ್ಯರ ಇ-ಕೆವೈಸಿಯನ್ನು ಪ್ರತಿ 5 ವರ್ಷಗಳಿಗೊಮ್ಮೆ ಮಾಡಿಸುವುದು ಕಡ್ಡಾಯವಾಗಿ ಮಾಡಬೇಕಾಗಿರುತ್ತದೆ. ಪ್ರಸ್ತುತ ಜಿಲ್ಲೆಯಲ್ಲಿ 05 ವರ್ಷ ಪೂರೈಸಿದ ಎ.ಎ.ವೈ 1,12,639 ಮತ್ತು ಬಿ.ಪಿ.ಎಲ್ 8,37,390 ಒಟ್ಟು 9,50,029 ಫಲಾನುಭವಿಗಳ ಇ-ಕೆವೈಸಿ ಮಾಡಿಸಬೇಕಾಗಿರುವುದರಿಂದ ಫಲಾನುಭವಿಗಳ ಪಟ್ಟಿಯನ್ನು ಈಗಾಗಲೇ ಆಯಾ ತಾಲ್ಲೂಕಿನ ನ್ಯಾಯಬೆಲೆ ಅಂಗಡಿ ಡೀಲರರುಗಳಿಗೆ ನೀಡಲಾಗಿದ್ದು, ಫಲಾನುಭವಿಗಳು ತಮಗೆ ಜೋಡಣೆಯಾದ ನ್ಯಾಯಬೆಲೆ ಅಂಗಡಿಗೆ ಖುದ್ದು ಭೇಟಿ ನೀಡಿ ಕಡ್ಡಾಯವಾಗಿ ಇ-ಕೆವೈಸಿಯನ್ನು ಮಾಡಿಸುವಂತೆ ಕೋರಲಾಗಿದೆ.

ಇ-ಕೆವೈಸಿ ಪ್ರಕ್ರಿಯೆಯು ಉಚಿತವಾಗಿದ್ದು, ಇದಕ್ಕೆ ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಸೆಪ್ಟೆಂಬರ್ 30 ಕೊನೆಯ ದಿನವಾಗಿರುತ್ತದೆ.

ಜಿಲ್ಲೆಯ ನ್ಯಾಯಬೆಲೆ ಅಂಗಡಿಗಳಲ್ಲಿ ಲಭ್ಯ ಪಟ್ಟಿಯಲ್ಲಿರುವ ಪಡಿತರ ಚೀಟಿದಾರರು ಮಾತ್ರ ಇ-ಕೆವೈಸಿ ಮಾಡಿಸಲು ಈ ಮೂಲಕ ತಿಳಿಸಿದೆ.

ಒಂದು ವೇಳೆ ಫಲಾನುಭವಿಗಳು ಇ-ಕೆವೈಸಿ ಮಾಡಿಸದೆ ಇದ್ದಲ್ಲಿ ಮುಂದಿನ ದಿನಗಳಲ್ಲಿ ಪಡಿತರ ಚೀಟಿಯಲ್ಲಿ ಅಂತಹ ಫಲಾನುಭವಿಗಳ ಹೆಸರನ್ನು ತೆಗೆಯಲು ಕ್ರಮವಹಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K